# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 44 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 21–08–2023 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 01 Issue - 44 | Title- Code: KARKAN 28269 | Chitradurga | Date: 21-08-2023 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಉತ್ತಮ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು ಮಾತ್ರ ಸ್ವಾವಲಂಬನೆ ಬದುಕು ರೂಪಿಸಿಕೊಳ್ಳ ಬಲ್ಲ: ಶಾಸಕ 2

ಭೂ ಸುಧಾರಣೆ ಮೂಲಕ ಎಲ್ಲರಿಗೂ ಸಮಾನ ಹಕ್ಕು ನೀಡಿದ ಸಾಮಾಜಿಕ ಹರಿಕಾರ: ಸಚಿವ 3

ರಂಗನಾಥಸ್ವಾಮಿ ಬೆಟ್ಟದ ಮೇಲಿನ ನೂತನ ದೇವಾಲಯಕ್ಕೆ ಶಂಕುಸ್ಥಾಪನೆ 4


## ಫಾಸ್ಟ್ ನ್ಯೂಸ್

### ವೆಂಕಟರಮಣ ಸ್ವಾಮಿ ಕಲ್ಯಾಣೋತ್ಸವ ವಿಶೇಷ ಪೂಜೆ

» **ಚಿತ್ರದುರ್ಗ**

ಚಿತ್ರದುರ್ಗದ ತುರುವನೂರು ರಸ್ತೆಯಲ್ಲಿರುವ ಶ್ರೀ ಪ್ರಸನ್ನ ವೆಂಕರಮಣ ಸ್ವಾಮಿ ದೇವಸ್ಥಾನವು ಮುಜರಾಯಿ ಅಧಿಸೂಚಿತ ದೇವಸ್ಥಾನವಾಗಿದೆ. ಭೀಮಾರೆಡ್ಡಿ ಬಿನ್ ಲಕ್ಷ್ಮಣ ಎಂಬ ಭಕ್ತರು ತಮ್ಮ ಸ್ವಂತ ಖರ್ಚಿನಲ್ಲಿ ದೇವಸ್ಥಾನದ ಅವರಣದಲ್ಲಿ ಸಮುದಾಯ ಭವನವನ್ನು ನಿರ್ಮಾಣ ಮಾಡಿದ್ದಾರೆ. ಇದನ್ನು ಭಕ್ತಾದಿಗಳ ಉಪಯೋಗಕ್ಕಾಗಿ ಮುಜರಾಯಿ ಇಲಾಖೆ ವಶಕ್ಕೆ ದೇಣಿಗೆ ರೂಪದಲ್ಲಿ ನೀಡಿದ್ದಾರೆ. ಈ ಸಮುದಾಯ ಭವನ ಲೋಕಾರ್ಪಣೆ ಸುಸಂದರ್ಭ ಹಾಗೂ ಶಾವಣ ಮಾಸದ ಹಿನ್ನಲೆಯಲ್ಲಿ ಆಗಸ್ಟ್ 27 ಹಾಗೂ 28 ರಂದು ಪ್ರಸನ್ನ ವೆಂಕಟರಮಣ ದೇವಸ್ಥಾನಗಳಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಲೊಳ್ಳಲಾಗಿದೆ. ಆಗಸ್ಟ್ 27 ರಂದು ಹೋಮ ಹಾಗೂ ವಿಶೇಷ ಪೂಜೆ ನಡೆಸಲಾಗುವುದು. ಆಗಸ್ಟ್ 28 ರಂದು ಶ್ರೀ ಪ್ರಸನ್ನ ವೆಂಕರಮಣ ಸ್ವಾಮಿ ಕಲ್ಯಾಣೋತ್ಸವ ನಡೆಯಲಿದೆ. ಭಕ್ತಾಧಿಗಳು ಹಾಗೂ ಸಾರ್ವಜನಿಕರು ಅಪಾರ ಸಂಖ್ಯೆಯಲ್ಲಿ ದೇವಸ್ಥಾನಕ್ಕೆ ಆಗಮಿಸಿ ದೇವರ ಕೃಪೆಗೆ ಪಾತ್ರರಾಗಬೇಕು. ಆಗಸ್ಟ್ 29 ರಿಂದ ಸಮುದಾಯ ಭವನದಲ್ಲಿ ಕಾರ್ಯಕ್ರಮಗಳನ್ನು ನಡೆಸಲು ಸಾರ್ವಜನಿಕರು ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಪರಿಚಿತ ಶವ ಪತ್ತೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಪ್ರಸನ್ನ ಟಾಕೀಸ್ ಪಕ್ಕದ ರಸ್ತೆಯಲ್ಲಿನ ಗುಜರಿ ಅಂಗಡಿಯ ಪಕ್ಕದ ಪ್ಯಾರಗಾನ್ ಗೋಡನ್ ಮುಂಭಾಗದ ಸಿಮೇಂಟ್ ಕಟ್ಟೆಯ ಮೇಲೆ ಸುಮಾರು 32 ವರ್ಷದ ವ್ಯಕ್ತಿಯ ಅನಾಮಧೇಯ ಶವ ಪತ್ತೆಯಾಗಿದೆ. ಈ ಕುರಿತು ಪ್ರಕರಣ 2023 ಮಾರ್ಚ್ 31 ರಂದು ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

ಮೃತ ಅನಾಮಧೇಯ ವ್ಯಕ್ತಿಯ ಚಹರೆ ಇಂತಿದೆ: ದುಂಡುಮುಖ, ಎಣ್ಣೆಗೆಂಪು ಬಣ್ಣ, ಉದ್ದನೆಯ ಮೂಗು, ಸಾಧಾರಣ ಮೈ ಕಟ್ಟು, ತಲೆಯಲ್ಲಿ 2 ಇಂಚು ಕಪ್ಪು ಮತ್ತು ಬಿಳಿ ಕೂದಲು ಇರುತ್ತದೆ. ಸಿಮೆಂಟ್ ಕಲರ್‌ನ ತುಂಬು ತೋಳಿನ ಟೀ ಶರ್ಟ್, ನೀಲಿ ಬಣ್ಣದ ಶೇಡ್‌ಡ್ ಕಲರ್‌ನ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ. ಈ ಮೇಲ್ಕಂಡ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 918194–222333 ಗೆ ಸಂಪರ್ಕಿಸಬೇಕೆಂದು ಚಿತ್ರದುರ್ಗ ನಗರ ಪೊಲೀಸ್ ಠಾಣೆ ಠಾಣಾಧಿಕಾರಿಗಳು ತಿಳಿಸಿದ್ದಾರೆ.

### ಗಿರಿಯಮ್ಮನಹಳ್ಳಿ ತಿರುವಿನದಲ್ಲಿ ಎರಡು ಬೈಕ್‌ಗಳ ನಡುವೆ ಡಿಕ್ಕಿ : ಇಬ್ಬರ ಸಾವು




» **ಚಳ್ಳಕೆರೆ**

ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ಗಿರಿಯಮ್ಮನಹಳ್ಳಿ ಗೇಟ್ ಬಳಿ ಎರಡು ಬೈಕ್‌ಗಳ ನಡುವೆ ಸಂಭವಿಸಿದ ಡಿಕ್ಕಿಯಲ್ಲಿ ಒರ್ವ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟು, ಮತ್ತೊಬ್ಬ ಗಾಯಾಳು ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ. ಹಿರೇಹಳ್ಳಿ ಕಡೆಯಿಂದ ಚಳ್ಳಕೆರೆ ಕಡೆಗೆ ಬರುತ್ತಿದ್ದ ನಾಗೇಶ್ ಎಂಬುವವರಿಗೆ ಸೇರಿದ ಮೋಟಾರ್ ಬೈಕ್‌ಗೆ ಹಿರೇಹಳ್ಳಿಯಿಂದ ವರವು ಕಡೆ ಜೋರಾಗಿ ಚಲಿಸುತ್ತಿದ್ದ ಸಣ್ಣಬೋರಯ್ಯ ಎಂಬುವವರ ಬೈಕ್ ಡಿಕ್ಕಿ ಪಡಿಸಿದ ಪರಿಣಾಮ ತಲೆಗೆ ಪೆಟ್ಟು ಬಿದ್ದು ರಕ್ತಗಾಯವಾಗಿದ್ದ ನಾಗೇಶ್(24) ಸ್ಥಳದಲ್ಲೇ ಮೃತಪಟ್ಟಿದರೆ, ಸಣ್ಣಬೋರಯ್ಯನೊಂದಿಗೆ ಪ್ರಯಾಣಿಸುತ್ತಿದ್ದ ನಾಗಮ್ಮ(45) ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಿಎಸ್‌ಐ ಗಾದಿಲಿಂಗಪ್ಪ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

ಪುಟ ↘ 3

### ಡಿ.ದೇವರಾಜ ಅರಸು ಜನ್ಮ ದಿನಾಚರಣೆ ಸಮಾರಂಭದಲ್ಲಿ ಸಚಿವ ಡಿ.ಸುಧಾಕರ್

# ಸಾಮಾಜಿಕ ಕಳಕಳಿ ಹರಿಕಾರ ಅರಸು







» **ಚಿತ್ರದುರ್ಗ**

ರಾಜ್ಯಕಂಡ ಅಪ್ರತಿಮ ಧೀಮಂತ ನಾಯಕ ಡಿ.ದೇವರಾಜು ಅರಸು ಅವರು ಸಮಾಜದ ಎಲ್ಲ ವರ್ಗದ ಜನರ ಅಭಿವೃದ್ಧಿಗಾಗಿ ದೂರದೃಷ್ಟಿಯಿಂದ ಕೆಲಸ ಮಾಡಿದ್ದಾರೆ. ಸಾಮಾಜಿಕ ಕಳಕಳಿಯ ಹರಿಕಾರ ಅರಸು ಎಂದು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಪರಿವರ್ತನೆಯ ಹರಿಕಾರ, ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಜನ್ಮ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿದ ಅವರು, ಡಿ.ದೇವರಾಜು ಅರಸು ಒಂದು ಪುಟ್ಟ ಹಳ್ಳಿಯಲ್ಲಿ ಜನಿಸಿದರೂ ಅವರಿಗಿರುವ ಸಾಮಾಜಿಕ ಕಳಕಳಿ ಆಗಾಧವಾದುದು. 1972 ರಲ್ಲಿ ರಾಜ್ಯದಲ್ಲಿ ಮುಖ್ಯಮಂತ್ರಿ ಆಗುವ ಮೂಲಕ ಅವರ ದೂರದೃಷ್ಟಿದಿಂದ ನಾವುಗಳು ಸಮಾಜದಲ್ಲಿ ಅಭಿವೃದ್ಧಿಯ ಹಾದಿಯಲ್ಲಿ ಸಾಗುತ್ತಿದ್ದೇವೆ. ಭೂಸುಧಾರಣೆ ಕಾಯ್ದೆ, ಹಾವನೂರು ವರದಿ ಸೇರಿದಂತೆ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ರೂಪಿಸಿದ ಅನೇಕ ಕ್ರಾಂತಿಕಾರಕ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿದ್ದಾರೆ. ಅವರ ಸಮಾಜಮುಖಿ ಕಾರ್ಯಗಳು, ಪ್ರಗತಿಪರ ಯೋಜನೆಗಳು ಅವಿಸ್ಮರಣೀಯ ಎಂದರು.

ಅರಸು ಅವರು ಬಡಮಕ್ಕಳ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿನಿಲಯಗಳ ಪರಿಕಲ್ಪನೆಯನ್ನು ರಾಜ್ಯಕ್ಕೆ ಕೊಟ್ಟಿದ್ದಾರೆ. ಸಮಾಜಕ್ಕೆ ಅವರ ಕೊಡುಗೆ ಅಪಾರ. ಇಂತಹ ಆದರ್ಶ ವ್ಯಕ್ತಿಗಳು ನಮಗೆ ಹಾಗೂ ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಬೇಕು. ಎಲ್ಲ ವರ್ಗಗಳನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಅನೇಕ ಕೊಡುಗೆಗಳನ್ನು ನೀಡಿದ್ದಾರೆ ಎಂದು ಸ್ಮರಿಸಿದರು.

ಅರಸು ಅವರು ಮೈಸೂರು ರಾಜ್ಯವನ್ನು ಕರ್ನಾಟಕ ರಾಜ್ಯ ಎಂದು ಮರು ನಾಮಕರಣ ಮಾಡಿ ಕರ್ನಾಟಕದ ಏಕೀಕರಣಕ್ಕೆ ಮಹತ್ವ ನೀಡಿ ರಾಜ್ಯವನ್ನು ಮುನ್ನೆಡೆಸಿದ ಧೀಮಂತ ವ್ಯಕ್ತಿ. ಸಾಮಾಜಿಕ ನ್ಯಾಯದ ಹರಿಕಾರ ಹಾಗೂ ಬಡವರ ಬಂಧು ಡಿ.ದೇವರಾಜು ಅರಸು ಜನ್ಮ ದಿನಾಚರಣೆಯನ್ನು ರಾಜ್ಯಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದ್ದು, ಇಂದಿನ ಯುವ ಜನತೆಯು ದೇವರಾಜ ಅರಸು ಅವರ ಆದರ್ಶ, ತತ್ವಗಳನ್ನು, ಸಾಮಾಜಿಕ ನ್ಯಾಯದ ಬದ್ಧತೆಯನ್ನು ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಲೇಖಕರು ಹಾಗೂ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ವಿಜೇತ ಎಚ್.ಆನಂದ ಕುಮಾರ್ ಅವರು ಡಿ.ದೇವರಾಜ ಅರಸುರವರ ತತ್ವ ಮತ್ತು ಚಿಂತನೆಗಳ ಬಗ್ಗೆ ಮಾತನಾಡಿ, ದೇವರಾಜ ಅರಸು ಅವರನ್ನೂ ಸದಾ ಸ್ಮರಿಸಬೇಕು. ಭಾರತದ ನೆಲದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಹೇಗೆ ಕಟ್ಟಕಡೆಯ ಮನುಷ್ಯನಿಗಾಗಿ ಕೆಲಸ ಮಾಡಿದರೂ ಹಾಗೆಯೇ ರಾಜ್ಯಕ್ಕಾಗಿ ಅರಸು ಅವರು ಕೆಲಸ ಮಾಡಿರುವುದು ದೊಡ್ಡ ಸಂಗತಿ ಎಂದು ಹೇಳಿದರು.

ರಾಜ್ಯದ ಇತಿಹಾಸದಲ್ಲಿ ಅರಸು ಯುಗ "ಸುವರ್ಣಯುಗ" ಎಂದು ಇತಿಹಾಸದಲ್ಲಿ ದಾಖಲಾಗಿದೆ. 1972ರಿಂದ 1980 ಕರ್ನಾಟಕದ ಆಡಳಿತಾತ್ಮಕವಾಗಿ ಸುವರ್ಣಯುಗ. ಅಂಬೇಡ್ಕರ್ ಹಾಕಿಕೊಟ್ಟ ಸಂವಿಧಾನ ಹಾಗೂ ಸಂವಿಧಾನದ ಆಶಯಗಳನ್ನು ಹಿಂದುಳಿದ ವರ್ಗಗಳಿಗೆ, ದಲಿತರಿಗೆ, ಅಲ್ಪಸಂಖ್ಯಾತರಿಗೆ ಸ್ಪರ್ಶ ಮಾಡಿದ ಪ್ರಪ್ರಥಮ ಮುಖ್ಯಮಂತ್ರಿ ದೇವರಾಜ ಅರಸು. ಡಾ.ಬಿ.ಆರ್. ಅಂಬೇಡ್ಕರ್, ನಾಲ್ವಡಿ ಕೃಷ್ಣರಾಜ ಒಡೆಯರ್, ದೇವರಾಜ ಅರಸು ಅವರು ನಮ್ಮೆಲ್ಲರಿಗೂ ಪ್ರಾತಃಸ್ಮರಣೀಯರಾಗಿದ್ದಾರೆ ಎಂದು ಹೇಳಿದರು.ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಡಾ.ಆರ್.ಸುಬ್ರಾನಯಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಸೇರಿದಂತೆ ಮತ್ತಿತರರು ಇದ್ದರು.

### ನಿರಂತರ ವಿದ್ಯುತ್ ಗ್ಯಾರಂಟಿಯಾಗಿ ನೀಡದಿದ್ದರೆ ಕಚೇರಿಗೆ ಬೀಗ ಜಡಿದು ಪ್ರತಿಭಟನೆ; ಬರಪೀಡಿತ ತಾಲ್ಲೂಕು ಘೋಷಣೆಗೆ ರೈತ ಸಂಘ ಆಗ್ರಹ

» **ಚಳ್ಳಕೆರೆ**

ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ಈ ಬಾರಿಯೂ ಬೆಳೆ ಸಿಗುದೆ ರೈತರು ಕಂಗಾಲಾಗಿದ್ದಾನೆ. ರಾಜ್ಯ ಸರ್ಕಾರ ಚಳ್ಳಕೆರೆ ತಾಲ್ಲೂಕನ್ನ ಬರಪೀಡಿತ ತಾಲ್ಲೂಕು ಎಂದು ಘೋಷಣೆ ಮಾಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಆಗ್ರಹಿಸಿದರು.

ಅವರು, ನಗರದ ರೈತ ಸಂಘದ ಕಚೇರಿಯಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವ ಬರದಲ್ಲಿ ರೈತರಿಗೆ ಅನ್ಯಾಯ ಮಾಡುತ್ತಿದೆ. ಲೋಡ್ ಶೆಡಿಂಗ್, ಓಪನ್ ಡೆಲ್ಟಾಗಳನ್ನು ಜಾರಿಗೆ ತರುವ ಮೂಲಕ ಸಂಜೆ 6ರಿಂದ10ವರೆಗೂ ವಿದ್ಯುತ್ ಸ್ಥಗಿತ ಮಾಡಿ ತೋಟದ ಮನೆಗಳಲ್ಲಿ ವಾಸಿಸುವ ರೈತ ಕುಟುಂಬಕ್ಕೆ ಅನ್ಯಾಯ ಮಾಡುತ್ತಿದೆ. ಕರೆಂಟ್ ಸ್ಥಗಿತದಿಂದ ಕುಡಿಯುವ ನೀರಿಗೆ ಸಮಸ್ಯೆ ಉಂಟಾಗಿದೆ, ಮಕ್ಕಳ ವಿದ್ಯಾಭ್ಯಾಸಕ್ಕೆ ಸಮಸ್ಯೆಯಾಗಯತ್ತಿದೆ. ವಿಷ ಜಂತುಗಳ ಕಾಟವೂ ಹೆಚ್ಚಾಗಿದೆ.

ಪುಟ ↘ 2



ಚಳ್ಳಕೆರೆ ನಗರದ ರೈತ ಸಂಘದ ಕಚೇರಿಯಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಕೆ.ಪಿ.ಭೂತಯ್ಯ ಮಾತನಾಡಿದರು.

## ಪ್ರಮುಖ ಸುದ್ದಿ

# ರಾಜ್ಯ ಹಿಂದುಳಿದ ವರ್ಗಗಳ ಅಭಿವೃದ್ದಿಯ ಹರಿಕಾರ ಡಿ.ದೇವರಾಜ ಅರಸುರವರು: ಶಾಸಕ ರಘುಮೂರ್ತಿ

» **ಚಳ್ಳಕೆರೆ**

ಕರ್ನಾಟಕ ರಾಜ್ಯದಲ್ಲಿ ಯಾವುದೇ ಸೌಲಭ್ಯ ದೊರೆಯದೆ ವಂಚಿತರಾಗಿ ಅಲಕ್ಷೆಗೊಂಡ ಹಿಂದುಳಿದ ಸಮುದಾಯವನ್ನು ಗುರುತಿಸಿ ಆ ಸಮುದಾಯದ ಸರ್ವತೋಮುಖ ಅಭಿವೃದ್ದಿಗೆ ಮುನ್ನುಡಿ ಬರೆದ ಮಹಾನ್ ಪುರುಷ ದಿ. ದೇವರಾಜ ಅರಸುರವರು. ಅರಸುರವರ ಸಂಕಲ್ಪ ಇಂದು ಹಿಂದುಳಿದ ಸಮುದಾಯದ ಶ್ರೇಯೋಭಿವೃದ್ದಿಗೆ ರಕ್ಷಾ ಕವಚವಾಗಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ಪಾವಗಡ ರಸ್ತೆಯ ಅರಸು ಭವನದಲ್ಲಿ ತಾಲ್ಲೂಕು ಹಿಂದುಳಿದ ವರ್ಗಗಳ ಇಲಾಖೆ ಹಮ್ಮಿಕೊಂಡಿದ್ದ ಡಿ.ದೇವರಾಜ ಅರಸುರವರ 108ನೇ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗಿ ಆಡಳಿತ ಚುಕ್ಕಾಣಿ ಹಿಡಿದಿದ್ದ ಡಿ.ದೇವರಾಜ ಅರಸುರವರು ಹಿಂದುಳಿದ ವರ್ಗಗಳ ಅಭಿವೃದ್ದಿ ಹರಿಕಾರ ಎಂಬ ಕೀರ್ತಿಗೆ ಪಾತ್ರರಾದರು. ಬೇರೆ ಎಲ್ಲಾ ಸಮುದಾಯಗಳಂತೆ ಹಿಂದುಳಿದ ಸಮುದಾಯವೂ ಸಹ ಸಮಾನತೆಯ ಬಾಳು ಬಾಳಬೇಕೆಂಬ ದಿವ್ಯದೃಷ್ಟಿ ಅವರದ್ದು. ಶೈಕ್ಷಣಿಕ,



ಉದ್ಯೋಗ ಹಾಗೂ ವಾಣಿಜ್ಯೋದ್ಯಮ ಕ್ಷೇತ್ರದಲ್ಲೂ ಸಹ ಹಿಂದುಳಿದ ವರ್ಗ ಗುರುತಿಸಿಕೊಳ್ಳುವಂತೆ ಮಾಡುವಲ್ಲಿ ಅವರು ಸಫಲರಾದರು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿ, ಎಲ್ಲರನ್ನೂ ಸ್ವಾಗತಿಸಿದ ತಾಲ್ಲೂಕು ಹಿಂದುಳಿದ ವರ್ಗಗಳ ಅಧಿಕಾರಿ ದಿವಾಕರ, ರಾಜ್ಯದ ಹಿಂದುಳಿದ ಸಮುದಾಯದ ಆರಾಧ್ಯ ದೈವವಾಗಿ ಡಿ.ದೇವರಾಜ ಅರಸುರವರು ಇಂದು ಮಾನ್ಯತೆ ಪಡೆದಿದ್ದಾರೆ. ಅಂದು ಅವರು ಈ ಸಮುದಾಯಗಳ ಬಗ್ಗೆ ನಿರ್ಲಕ್ಷ್ಯೆ ವಹಿಸಿದ್ದರೆ ಈ ಸಮುದಾಯ ಅನೇಕ ಕಷ್ಟಕಾರ್ಪಣ್ಯಗಳಿಗೆ ಈಡಾಗುತ್ತಿತ್ತು. ಈ ಸಮುದಾಯದ ಲಕ್ಷಾಂತರ ಯುವಕರು, ಯುವತಿಯರು ಎಲ್ಲಾ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದರು. ಇಡೀ ಹಿಂದುಳಿದ ಸಮುದಾಯವೇ ಸಂಕಷ್ಟಲ್ಲಿರುತ್ತಿತ್ತು. ಇಂತಹ ಬಹುದೊಡ್ಡ ಅಪಾಯವನ್ನು ತಪ್ಪಿಸಿ ಹಿಂದುಳಿದ ಸಮುದಾಯಕ್ಕೆ ಆಶಾಕಿರಣವಾಗಿ ಪ್ರಜ್ವಲಿಸಿದವರು ಡಿ.ದೇವರಾಜ ಅರಸುರವರು ಎಂದರು.

ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, ರಾಜ್ಯದಲ್ಲಿ ಹಲವಾರು ಸಮುದಾಯಗಳು ವಿವಿಧ ಸೌಲಭ್ಯವನ್ನು ಪಡೆಯುತ್ತಿವೆ. ಅದೇ ರೀತಿ ಸರ್ಕಾರದ ನಿಯಮದಂತೆ ಹಿಂದುಳಿದ ಸಮುದಾಯವೂ ಸಹ ಇಂದು ಅನೇಕ ಸೌಲಭ್ಯಗಳನ್ನು ಪಡೆದು ಸಮಾಜದ ಅಭಿವೃದ್ದಿಯಲ್ಲಿ ಮುಂಚೂಣಿ ಪಾತ್ರ ವಹಿಸಿದೆ. ಹಿಂದುಳಿದ ಸಮುದಾಯಕ್ಕಾಗಿ ವಿದ್ಯಾರ್ಥಿನಿಲಯ, ಶಾಲಾ ಕಾಲೇಜುಗಳು ಆರಂಭಿಸಿ ಸಮುದಾಯದ ಮಕ್ಕಳು ನೆಮ್ಮದಿಯಿಂದ ಶಿಕ್ಷಣ ಪಡೆದು ಬದುಕು ರೂಪಿಸಿಕೊಳ್ಳುವ ಅವಕಾಶವನ್ನು ಸರ್ಕಾರ ನಿರ್ಮಾಣ ಮಾಡಿದ್ದು, ಇದರ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿ ಎಂದರು.

ಕಾರ್ಯಕ್ರಮದಲ್ಲಿ ಡಿವೈಎಸ್ಪಿ ರಾಜಣ್ಣ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಪ್ರಭಾರ ಇಒ ಸಂತೋಷ್, ಪಶುವೈದ್ಯಾಧಿಕಾರಿ ರೇವಣ್ಣ, ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಪ್ರೊ.ಶಿವಲಿಂಗಪ್ಪ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಬರಪೀಡಿತ ತಾಲ್ಲೂಕು ಘೋಷಣೆಗೆ ಆಗ್ರಹ

» ಮೊದಲ ಪುಟದಿಂದ

ನಿರಂತರವಾಗು ತ್ರೀ ಫೇಸ್ ವಿದ್ಯುತ್ ನೀಡದಿದ್ದರೆ ಬೆಸ್ಕಾಂ ಕಚೇರಿಗೆ ಬೀಗ ಜಡಿದು ಪ್ರತಿಭಟಿಸುವ ಎಚ್ಚರಿಕೆಯನ್ನು ನೀಡಿದರು. ತಾಲ್ಲೂಕಿನಲ್ಲಿ ಅಲ್ಪಸ್ವಲ್ಪ ಬಿತ್ತನೆಯಾಗಿತ್ತು ಅದಕ್ಕೂ ಸೂಕ್ತ ಕಾಲಕ್ಕೆ ಮಳೆಬಾರದೆ ಬೆಳೆ ಸಂಪೂರ್ಣ ಒಣಗುವ ಸ್ಥಿತಿ ತಲುಪಿ ಬರದ ಛಾಯೆ ಗೋಚರವಾಗಿದೆ. ರಾಜ್ಯ ಸರ್ಕಾರ ಕೂಡಲೇ ಬೆಳೆ ವಿಮೆ, ಬೆಳೆ ಪರಿಹರ ಹಣ ಬಿಡುಗಡೆ ಮಾಡಬೇಕು ಮತ್ತು ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಣೆ ಮಾಡಿ ಸೂಕ್ತ ಸೌಲಭ್ಯ ಒದಗಿಸಬೇಕು ಎಂದು ಆಗ್ರಹ ಪಡಿಸಿದರು. ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಜಿ.ಎಚ್.ತಿಪ್ಪೇಸ್ವಾಮಿ ಮಾತನಾಡಿ, ಸರ್ಕಾರದ ಐದು ಗ್ಯಾರಂಟಿಗಳಂತೆ ನಿರಂತರ ವಿದ್ಯುತ್ ಗ್ಯಾರಂಟಿಯಾಗಿ ನೀಡಬೇಕು, ಹಾಕಿದ ಬೆಳೆಗಳು ಮಳೆ ಇಲ್ಲದೆ ಒಣಗುತ್ತಿವೆ. ನಿರಂತರ ವಿದ್ಯುತ್ ಸ್ಥಗಿತಗೊಳಿಸುತ್ತಿರುವುದರಿಂದ ರೈತ ಬೆಳೆ ಕೈತಪ್ಪುವ ಆಂತಕ ಹೆಚ್ಚಿದೆ. ತ್ರೀ ಫೇಸ್ ವಿದ್ಯುತ್ ನೀಡುವ ಮೂಲಕ ರೈತರು ಬೆಳೆದ ಬೆಳೆಗಳನ್ನು ಉಳಿಸಬೇಕು. ಬೆಸ್ಕಾಂ ಇಲಾಖೆ ರಿಪೇರಿಗೆ ನೀಡಿದ ಟ್ರಾನ್ಸ್ ಫಾರ್ಮರ್ ಗಳನ್ನು ನೀಡಲು ಒಂದು ತಿಂಗಳು ಕಾಲ ಪಡೆಯುತ್ತಿದೆ ಇದರನ್ನು ಸರಿಪಡಿಸಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ರೈತ ಸಂಘದ ನಿರ್ದೇಶಕ ತಿಪ್ಪೇಸ್ವಾಮಿ, ಹಾವಲಪ್ಪ, ರಾಜಣ್ಣ, ಯಾದಲಗಟ್ಟೆ ರಾಜಣ್ಣ, ಹಿರೇಮಧುರೆ ಬಿ.ಶಿವಣ್ಣ, ರಾಜಪ್ಪ, ತಿಪ್ಪೇಸ್ವಾಮಿ ಮುಂತಾದವರು ಭಾಗವಹಿಸಿದ್ದರು.

### ಬ್ಯಾಗ್ ಲೆಸ್ ಡೇ: ವಿದ್ಯಾರ್ಥಿನಿಯ ಕ್ರಿಯಾಶೀಲ ಕಲಿಕೆಗೆ ಪ್ರೇರಕ: ಕೆ.ಎಸ್.ಸುರೇಶ್



■ ಚಳ್ಳಕೆರೆ

ಸರ್ಕಾರ ಶಿಕ್ಷಣ ಇಲಾಖೆಯಲ್ಲಿ ಹಲವಾರು ಬದಲಾವಣೆಗಳ ಮೂಲಕ ಶಿಕ್ಷಣ ಮೌಲ್ಯವನ್ನು ಹೆಚ್ಚಿಸುವಲ್ಲಿ ಉತ್ತಮ ಹೆಜ್ಜೆ ಇಡುತ್ತಿದೆ. ಇತ್ತೀಚಿನ ದಿನಗಳಲ್ಲಿ ವಾರಕ್ಕೆ ಒಂದು ದಿನ ವಿಶೇಷವಾಗಿ ಶನಿವಾರ ಶಾಲಾ ವಿದ್ಯಾರ್ಥಿಗಳು ತಮ್ಮ ಬ್ಯಾಗ್‌ಗಳಿಲ್ಲದೆ ಶಾಲೆಗೆ ಆಗಮಿಸಿ ಇತರೆ ಚಟುವಟಿಕೆಯಲ್ಲಿ ಭಾಗವಹಿಸಬಹುದು. ಇದು ಶಿಕ್ಷಣ ಇಲಾಖೆಯ ನೂತನ ಪ್ರಯೋಗವಾಗಿದ್ದು, ಎಲ್ಲಾ ವಿದ್ಯಾರ್ಥಿಗಳಿಗೆ ಹೆಚ್ಚು ಉಪಯುಕ್ತ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಹೆಗ್ಗೆರೆ ತಾಯಮ್ಮ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಬ್ಯಾಗ್ ಲೆಸ್ ಡೇ ಸಂಭ್ರಮ ನಿಮಿತ್ತ ಹಮ್ಮಿಕೊಂಡಿದ್ದ ಸಂಪ್ರದಾಯಿಕ ಚಿತ್ರ ಕಲಾ ಮತ್ತು ಮದರಂಗಿ ಮೇಳವನ್ನು ಚಿತ್ರ ಬರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ಈ ಶಾಲೆ ಬಾಲಕಿಯರಿಗೆ ಮೀಸಲಿದ್ದು ಇಂದಿನ ಎರಡೂ ಕಾರ್ತಕ್ರಮಗಳು ಭವಿಷ್ಯದ ದಿನಗಳಲ್ಲಿ ನಿಮಗೆ ಉಪಯುಕ್ತವಾಗಲಿದೆ.

### ತಿಮ್ಮಪ್ಪಯ್ಯನಹಳ್ಳಿಯಲ್ಲಿ ನೈರ್ಮಲ್ಯ ಜಾಗೃತಿ ಜಾಥ



» ನಾಯಕನಹಟ್ಟಿ

ಪ್ರತಿಯೊಬ್ಬರು ಶುದ್ಧವಾದ ನೀರನ್ನು ಕುಡಿಯಬೇಕು, ನಿಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ತಿಮ್ಮಪ್ಪಯ್ಯನಹಳ್ಳಿ ಗ್ರಾಮಪಂಚಾಯಿತಿಯ ಕಾರ್ಯದರ್ಶಿಯಾದ ನಾಗರಾಜ ನಾಯ್ಕ ತಿಳಿಸಿದರು. ನಾಯಕನಹಟ್ಟಿ ಹೋಬಳಿಯ ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಸ್ವಚ್ಛತೆ ನೈರ್ಮಲ್ಯ ಕಾಪಾಡಿಕೊಳ್ಳಲು ವಿಶೇಷ ಆಂದೋಲನದಡಿ ಜಾಥಾ ಮತ್ತು ಪಂಜಿನ ಮೆರವಣಿಗೆ ಕಾರ್ಯಕ್ರಮವನ್ನು ಸರ್ಕಾರಿ ಪ್ರಾಥಶಾಲೆಯ ವಿದ್ಯಾರ್ಥಿಗಳಿಂದ ಜಾಗೃತಿ ಮೂಡಿಸಿದರು. ನಂತರ ಮಾತನಾಡಿದ ಅವರು ಶುದ್ಧ ಆಹಾರವನ್ನು ಬಳಸಬೇಕು, ಕಾಯಿಸಿ ಆರಿಸಿದ ನೀರನ್ನು ಕುಡಿಯಬೇಕು, ಸ್ವಚ್ಛತೆ ಕಾಪಾಡಿಕೊಳ್ಳಬೇಕು ಶೌಚಾಲಯವನ್ನು ಬಳಸಬೇಕು, ಕಲುಷಿತ ನೀರನ್ನು ಕಂಡುಹಿಡಿದು ತಡೆಗಟ್ಟಬೇಕು ಎಂದರು. ಶೌಚಾಲಯವನ್ನು ಬಳಸಿ ಶೌಚಲಯ ಕಟ್ಟಿಸಿಕೊಂಡರೆ ಸಾಲದು ಅದನ್ನು ಸರಿಯಾಗಿ ಬಳಕೆ ಮಾಡುವುದರ ಮೂಲಕ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು. ಮನೆಗೊಂದು ಶೌಚಾಲಯ ಕಟ್ಟಿಸಿಕೊಳ್ಳಿ ಆ ಮೂಲಕ ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದಲ್ಲದೇ ಇಡೀ ಗ್ರಾಮವನ್ನು ಕಲುಷಿತದಿಂದ ತಡೆಗಟ್ಟಬಹುದು ಎಂದು ಮಾತನಾಡಿದರು. ಮತ್ತು ನಿಮ್ಮ ಮನೆಯ ಅಕ್ಕ-ಪಕ್ಕ ಸ್ವಚ್ಛತೆ ಕಾಪಾಡಿಕೊಳ್ಳಬೇಕು, ಗಿಡಗಳನ್ನು ಬೆಳಸಬೇಕು, ಮರಗಿಡಗಳನ್ನು ನೆಡುವುದರ ಜೊತೆಗೆ ಅವನ್ನು ಮಕ್ಕಳಂತೆ ಪೋಷಣೆಮಾಡಬೇಕು. ಈ ಸಂದರ್ಭದಲ್ಲಿ ಉಪಸ್ಥಿತರಾದ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರು, ಜಾಗೃತಿಮೂಡಿಸಿದರು.

# ಉತ್ತಮ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು ಮಾತ್ರ ಸ್ವಾವಲಂಬನೆ ಬದುಕು ರೂಪಿಸಿಕೊಳ್ಳ ಬಲ್ಲ: ಶಾಸಕ

» ಚಳ್ಳಕೆರೆ

ಇತ್ತೀಚಿನ ವರ್ಷಗಳಲ್ಲಿ ವಿದ್ಯಾಭ್ಯಾಸಕ್ಕಾಗಿ ಗ್ರಾಮೀಣ ಭಾಗದಿಂದ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಕಾಲೇಜಿಗೆ ಸೇರ್ಪಡೆಯಾಗುತ್ತಿದ್ದು, ಗುಣಮಟ್ಟದ ಸೇರ್ಪಡೆಯಾಗುವ ಮೂಲಕ ವಿದ್ಯಾರ್ಥಿಗಳ ಬದುಕನ್ನು ಹಸನುಗೊಳಿಸುವ ಕಾರ್ಯವನ್ನು ಉಪನ್ಯಾಸಕ ವರ್ಗ ಮಾಡಬೇಕಿದೆ ಎಂದು ಶಾಸಕ ಟಿ.ರಘುಮೂರ್ತಿ ಮನವಿ ಮಾಡಿದರು. ಅವರು, ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಾಲೇಜು ಆಡಳಿತ ಮಂಡಳಿ ಹಮ್ಮಿಕೊಂಡಿದ್ದ ಕ್ರೀಡಾ, ಸಾಂಸ್ಕೃತಿಕ, ಎನ್‌ಎಸ್‌ಎಸ್, ರೋವರ್ಸ್ ಹಾಗೂ ರೇಂಜರ್ಸ್ ಘಟಕಗಳ ಉದ್ಘಾಟನಾ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.



ಪ್ರಸ್ತುತ ಈ ಕಾಲೇಜಿಗೆ ಸರ್ಕಾರದ ಅನುದಾನದ ಮೂಲಕ ಸುಮಾರು ನಾಲ್ಕು ಕೋಟಿಗೂ ಹೆಚ್ಚು ಹಣ ನೀಡಿದ್ದು, 10ಕ್ಕೂ ಹೆಚ್ಚು ಕೊಠಡಿಗಳು ನಿರ್ಮಾಣವಾಗಿವೆ. ಕಾಲೇಜು ಆಡಳಿತ ಮಂಡಳಿ ಆಡಿಟೋರಿಯಂ, ಆರ್‌ಓ ಪ್ಲಾಂಟ್ ಹಾಗೂ ಇನ್ನಿತರ ಬೇಡಿಕೆಯನ್ನು ಸಲ್ಲಿಸಿದ್ದಾರೆ. ನನ್ನ ಅನುದಾನದಲ್ಲಿ ಹಂತ, ಹಂತವಾಗಿ ಇವುಗಳನ್ನು ಈಡೇರಿಸಲು ಪ್ರಯತ್ನಿಸುತ್ತೇನೆ. ಪ್ರಸ್ತುತ 2023ರಲ್ಲಿ ಒಟ್ಟಾರೆ ಕಾಲೇಜು ಫಲಿತಾಂಶ ಶೇ.63ರಾಗಿದ್ದು, ಕಳೆದ ವರ್ಷಕ್ಕಿಂತ ಹೆಚ್ಚಾಗಿದೆ. ಆದರೆ, ಈ ಫಲಿತಾಂಶ ಶೇ.100ಕ್ಕೆ ಹೆಚ್ಚಿಸುವಲ್ಲಿ ಎಲ್ಲರೂ ಗಮನ ನೀಡಬೇಕು. ವಿದ್ಯಾರ್ಥಿಗಳು ಸಹ ಶಿಕ್ಷಣದಿಂದ ಮಾತ್ರ ತಮ್ಮ ಬದುಕು ಬಂಗಾರವಾಗಲಿದೆ ಎಂಬ ಸತ್ಯವನ್ನು ಅರಿಯಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ಪ್ರಾಂಶುಪಾಲ ಎಂ.ರವೀಶ್ ಮಾತನಾಡಿ, ಪ್ರಸ್ತುತ ವರ್ಷವೂ ಸಹ ಕಾಲೇಜಿನ ದಾಖಲಾತಿ ಹೆಚ್ಚಿದೆ. ಎಲ್ಲಾ ವಿಭಾಗಗಳಲ್ಲೂ ಗಣನೀಯವಾಗಿ ವಿದ್ಯಾರ್ಥಿಗಳ ಸಂಖ್ಯೆ ಏರಿಕೆಯಾಗಿದೆ. ಎಲ್ಲರ ಪರಿಶ್ರಮದಿಂದ ಈ ಬಾರಿಯ ಫಲಿತಾಂಶವನ್ನು ಉತ್ತಮ ಪಡಿಸಲಾಗಿದೆ. ವಿಶೇಷವಾಗಿ ಕಲಾ ವಿಭಾಗದಲ್ಲಿ ಶೇ.76, ವಿಜ್ಞಾನದಲ್ಲಿ ಶೇ.64, ವಾಣಿಜ್ಯದಲ್ಲಿ 51ರಷ್ಟು ಫಲಿತಾಂಶ ಪಡೆಯುವ ಮೂಲಕ ವಿದ್ಯಾರ್ಥಿಗಳು ಸಾಧನೆ ಮಾಡಿದ್ದಾರೆ. ಪ್ರಸ್ತುತ 2024ರ ಫಲಿತಾಂಶ ಉತ್ತಮ ಪಡಿಸುವ ನಿಟ್ಟಿನಲ್ಲಿ ಕಾಲೇಜಿನ ಎಲ್ಲಾ ವಿಭಾಗದ ಉಪನ್ಯಾಸಕರು ಈಗಾಗಲೇ ಚರ್ಚೆ ನಡೆಸಿ ಕಾರ್ಯೋನ್ಮುಖರಾಗಿದ್ದಾರೆ. ಕಾಲೇಜಿನ ಫಲಿತಾಂಶ ಶೇ.100ಕ್ಕೆ ಹೆಚ್ಚಿಸಬೇಕೆಂಬ ಸಂಕಲ್ಪ ನಮ್ಮದಾಗಿದೆ. ವಿದ್ಯಾರ್ಥಿಗಳು ಸಹ ಈ ನಿಟ್ಟಿನಲ್ಲಿ ಉಪನ್ಯಾಸಕರೊಂದಿಗೆ ಹೆಜ್ಜೆ ಹಾಕಬೇಕು. ಯಾವುದೇ ಹಂತದಲ್ಲೂ ಕಲಿಕೆ ವಿಚಾರದಲ್ಲಿ ನಿರ್ಲಕ್ಷ್ಯೆ ಬೇಡ ಎಂದರು. ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಸುಮಕ್ಕ, ಎಂ.ಜೆ. ರಾಘವೇಂದ್ರ, ದತ್ತಿನಿಧಿ ದಾನಿ ರುಕ್ಮಿಣಿ, ಕಾಲೇಜು ಅಭಿವೃದ್ದಿ ಸಮಿತಿ ಸದಸ್ಯರಾದ ಕೋಣಪ್ಪ, ಜ್ಯೋತಿಗುರುಸ್ವಾಮಿ, ರುದ್ರಮುನಿ, ಮೂಡಲಗಿರಿಯಪ್ಪ, ಗದ್ದಿಗೆ ತಿಪ್ಪೇಸ್ವಾಮಿ, ಟಿ.ಗಿರಿಯಪ್ಪ, ಉಪನ್ಯಾಸಕರಾದ ನಾಗರಾಜ ಬೆಳಗಟ್ಟ, ಶಾಂತಕುಮಾರಿ, ಪುಷ್ಪಲತಾ, ಲಲಿತಮ್ಮ, ಜಬಿವುಲ್ಲಾ, ಚಂದ್ರಶೇಖರ್, ಹಬೀಬುಲ್ಲಾ, ನಿವೃತ್ತ ಪ್ರಾಂಶುಪಾಲ ಎಸ್.ಲಕ್ಷ್ಮಣ ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ, ಎನ್‌ಎಸ್‌ಎಸ್‌ನಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

## ಸದ್ಭಾವನಾ ದಿನ: ಪ್ರತಿಜ್ಞಾವಿಧಿ ಬೋಧನೆ

» ಚಿತ್ರದುರ್ಗ

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸದ್ಭಾವನಾ ದಿನದ ಅಂಗವಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಪ್ರತಿಜ್ಞಾವಿಧಿ ಬೋಧಿಸಿದರು.



'ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಭೇದಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ.

ಅಲ್ಲದೇ, ವೈಯಕ್ತಿಕವಾಗಿಯಾಗಲಿ ಅಥವಾ ಸಾಮೂಹಿಕವಾಗಿಯಾಗಲಿ ನಮ್ಮಲ್ಲಿರುವ ಎಲ್ಲ ಭೇದಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇವೆಂದು ಸಹ ಪ್ರತಿಜ್ಞೆ ಮಾಡುತ್ತೇನೆ' ಎಂಬ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಮಾತನಾಡಿ, ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ, ಪ್ರತಿ ವರ್ಷ ಆಗಸ್ಟ್ 20ರಂದು "ಸದ್ಭಾವನಾ ದಿನ"ವನ್ನಾಗಿ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಿಬ್ಬಂದಿ ವರ್ಗ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಉಪವಿಭಾಗಾಧಿಕಾರಿಗಳ ಕಚೇರಿ, ಸಣ್ಣ ಉಳಿತಾಯ ಇಲಾಖೆ, ಭೂದಾಖಲೆಗಳ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಇಲಾಖೆ ಸಿಬ್ಬಂದಿ ವರ್ಗದವರು ಇದ್ದರು.

## ಛಾಯಾಗ್ರಾಹಕರ ದಿನಾಚರಣೆ





» ಚಿತ್ರದುರ್ಗ

184ನೇ ಛಾಯಾಗ್ರಾಹಕರ ದಿನಾಚರಣೆಯನ್ನು ಚಿತ್ರದುರ್ಗ ಫೋಟೋ ಮತ್ತು ವಿಡಿಯೋ ಗ್ರಾಫರ್ ವೆಲ್ಪೇರ್ ಅಸೋಸಿಯೇಷನ್‌ವತಿಯಿಂದ ಚಿತ್ರದುರ್ಗದ ವಾಸವಿಮಹಲ್ ರಸ್ತೆಯಲ್ಲಿರುವ ಕಚೇರಿಯಲ್ಲಿ ಸರಳವಾಗಿ ಆಚರಣೆ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಹಿರಿಯ ಛಾಯಾಗ್ರಹಾಕರಾದಂತ ಪುಟ್ಟನಾಯಕ್ ರಾಜಣ್ಣ ರಫಿ ವೆಂಕಟೇಶ್ ಹಾಗೂ ಪೈಲೆಟ್ ಪ್ರಕಾಶ್ ಮಹಾಂತೇಶ್ ಪೈಲೆಟ್ ನಾಗರಾಜ್ ಹಾಗು ಇನ್ನು ಅನೇಕ ಛಾಯಾಗ್ರಾಹಕರು ಭಾಗಿಯಾಗಿದ್ದರು.

## ರಾಜೀವ್ ಗಾಂಧಿಯವರ ಆದರ್ಶ ಕಾಂಗ್ರೆಸ್ ಪಕ್ಷಕ್ಕೆ ಸದಾ ಸ್ಪೂರ್ತಿ : ಶಾಸಕ ರಘುಮೂರ್ತಿ

» ಚಳ್ಳಕೆರೆ

ರಾಷ್ಟ್ರದ ಮಾಜಿ ಪ್ರಧಾನಮಂತ್ರಿ ಫೆರಂಬೂರಿನ ಸಾರ್ವಜನಿಕ ಸಭೆಯಲ್ಲಿ ನಕಲ್ಸ್‌ನ ಮಾನವ ಬಾಂಬ್‌ಗೆ ದಾಳಿಗೆ ಬಲಿಯಾದ ರಾಜೀವ್ ಗಾಂಧಿಯವರ ತ್ಯಾಗಬಲಿದಾನಗಳು ದೇಶದ ಜನರಿಗೆ ಆದರ್ಶಪ್ರಾಯವಾಗಿವೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.



ಅವರು, ನಗರದ ಶಾಸಕ ಭವನದಲ್ಲಿ ಭಾನುವಾರ ದಿವಂಗತ ರಾಜೀವ್ ಗಾಂಧಿ ಮತ್ತು ಡಿ.ದೇವರಾಜ ಅರಸುರವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿಪಾಲ್ಗೊಂಡುಮಾತನಾಡಿದರು. ದೇಶದಲ್ಲಿ ಕಳೆದ ಸುಮಾರು 130 ವರ್ಷಗಳಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಇಂತಹ ಮಹಾನ್ ನಾಯಕ ಮಾರ್ಗದರ್ಶನದಲ್ಲಿ ಆಡಳಿತ ನಡೆಸಿದೆ. ಮುಂಬರುವ ದಿನಗಳಲ್ಲೂ ಸಹ ಪಕ್ಷದ ಎಲ್ಲಾ ಹಂತದ ಮುಖಂಡರು, ಕಾರ್ಯಕರ್ತರು ಇವರ ಆದರ್ಶ ಮೈಗೂಡಿಸಿಕೊಂಡು ಪಕ್ಷದ ಸಂಘಟನೆಯಲ್ಲಿ ತೊಡಗಬೇಕೆಂದು ತಿಳಿಸಿದರು.

ಕಾಂಗ್ರೆಸ್ ಹಿರಿಯ ಮುಖಂಡ ಟಿ.ಪ್ರಭುದೇವ್, ನಗರಭಾ ಸದಸ್ಯರಾದ ರಮೇಶ್‌ಗೌಡ, ವಿರೂಪಾಕ್ಷಿ, ವೈ.ಪ್ರಕಾಶ್, ಎಂ.ಜೆ.ರಾಘವೇಂದ್ರ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಮಾಜಿ ಪುರಸಭಾ ಅಧ್ಯಕ್ಷೆ ನಿಂಗಮ್ಮ, ಕೆಪಿಸಿಸಿ ಕುಶಲಕರ್ಮಿ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಪಿ.ತಿಪ್ಪೇಸ್ವಾಮಿ, ಬಡಗಿಪಾಪಣ್ಣ, ರಂಗಕರ್ಮಿ ಟಿ.ತಿಪ್ಪೇಸ್ವಾಮಿ, ರುದ್ರಮುನಿ, ಮಂಜುನಾಥ, ಕೃಷ್ಣಮೂರ್ತಿ, ಹನುಮಂತಪ್ಪ, ಮಹಮ್ಮದ್ ಸೈಪುಲ್ಲಾ, ಭೀಮಣ್ಣ, ಇಸ್ಮಾಯಿಲ್ ಭಾಗವಹಿಸಿದ್ದರು.

## ವರ್ಗಾವಣೆಗೊಂಡ ಕಾಲೇಜಿನ ಪ್ರಾಧ್ಯಾಪಕರಿಗೆ ಬೀಳ್ಕೊಡುಗೆ



» ಹೊಸದುರ್ಗ

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಲವಾರು ವರ್ಷಗಳ ಕಾಲ ಸೇವೆ ಸಲ್ಲಿಸಿ, ಇಲಾಖೆಯ ಆದೇಶದಂತೆ ಬೇರೆಡೆಗೆ ವರ್ಗಾವಣೆಗೊಂಡ ಪ್ರಾಂಶುಪಾಲರಾದ ಹೆಚ್.ಆರ್. ವೆಂಕಟೇಶ್, ಸಹಾಯಕ ಪ್ರಾಧ್ಯಾಪಕರಾದ ಕೃಷ್ಣಪ್ರಸಾದ್, ಡಾ. ಎನ್.ಮೋಹನ್, ಎಸ್. ಹೆಚ್.ಶಿವಣ್ಣ, ಬಿ.ವಿ.ರವಿಕುಮಾರ್, ಪಿ.ಮರಿಯಾ,ಎನ್.ಕೆ. ನಾಗರಾಜ್ ಮತ್ತು ರಾಮಚಂದ್ರ ಇವರುಗಳಿಗೆ ಕಾಲೇಜಿನಲ್ಲಿ ಉಳಿದ ಪ್ರಾಧ್ಯಾಪಕರು ಮತ್ತು ಸಿಬ್ಬಂದಿಗಳು ಗುರುವಾರ ಸನ್ಮಾನಿಸಿ,ಗೌರವಿಸಿ ಬೀಳ್ಕೊಡುಗೆ ನೀಡಿದರು. ನಂತರ ನೂತನ ಪ್ರಾಂಶುಪಾಲರಾಗಿ ಪ್ರಾ.ಭ್ರಮರಾಂಭ ಅಧಿಕಾರ ವಹಿಸಿಕೊಂಡರು.

**ಪ್ರಮುಖ ಸುದ್ದಿ**

# ಗ್ರಾ.ಪಂಗಳಲ್ಲಿ ಜಾಗೃತಿ: ಕಾಯಿಸಿ, ಆರಿಸಿದ ನೀರು ಕುಡಿಯಿರಿ

» ಚಿತ್ರದುರ್ಗ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರ ಆದೇಶದ ಮೇರೆಗೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಏಕ ಕಾಲದಲ್ಲಿ ಸ್ವಚ್ಛತೆ, ವೈಯಕ್ತಿಕ ಶುಚಿತ್ವ ಹಾಗೂ ನೈರ್ಮಲ್ಯ ಕುರಿತು ಜಾಗೃತಿಗಾಗಿ ಶನಿವಾರ ವಿಶೇಷ ಆಂದೋಲನ ನಡೆಸಲಾಯಿತು.

ಸ್ವಚ್ಛ ಭಾರತ ಮಿಷನ್ ಗ್ರಾಮೀಣ ಯೋಜನೆಯಡಿ ಜಿಲ್ಲೆಯ 189 ಗ್ರಾಮ ಪಂಚಾಯಿತಿಗಳಲ್ಲಿ ಏಕಕಾಲಕ್ಕೆ ಜಾಗೃತಿ ಜಾಥಾ ನಡೆಸಲಾಯಿತು. 'ನಾನು ಬದಲಾದರೆ ಜಗತ್ತು ಬದಲಾದಂತೆ, ಬದಲಾವಣೆ ನಮ್ಮಿಂದಲೇ ಆಗಲೀ' ಎಂಬ ಘೋಷವಾಕ್ಯದೊಂದಿಗೆ ಗ್ರಾಮೀಣ ಜನರಿಗೆ ವೈಯಕ್ತಿಕ ಶುಚಿತ್ವ ಹಾಗೂ ನೈರ್ಮಲ್ಯ ಕುರಿತು ಅರಿವು ಮೂಡಿಸಲಾಯಿತು. ಗ್ರಾಮಗಳಲ್ಲಿ ಕಸ ಸಂಗ್ರಹಿಸುವ ಸ್ವಚ್ಛ ವಾಹಿನಿ ಮೂಲಕ ಆಡಿಯೋ ಜಿಂಗಲ್ಸ್‌ಗಳನ್ನು ಸಹ ಬಿತ್ತರಿಸಲಾಯಿತು.



ಎಲ್ಲಾ ಚುನಾಯಿತ ಪ್ರತಿನಿಧಿಗಳು, ಗ್ರಾ.ಪಂ ಸಿಬ್ಬಂದಿ, ಆಶಾ, ಅಂಗನವಾಡಿ ಕಾರ್ಯಕರ್ತರು, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಮಹಿಳಾ ಸಂಘಗಳು, ಸ್ಥಳೀಯ ಯುವಕ-ಯುವತಿ ಸಂಘಗಳನ್ನು ಜಾಗೃತಿ ಜಾಥದಲ್ಲಿ ಪಾಲ್ಗೊಳ್ಳುವಂತೆ ಮಾಡಿ, ಗ್ರಾಮಗಳ ಪ್ರತಿ ಮನೆಗೂ ಸ್ವಚ್ಛತೆಯ ಸಂದೇಶ ಸಾರಲಾಯಿತು.

ಕುಡಿಯುವ ನೀರಿನಿಂದ ಬರಹುದಾದ ಸಾಂಕ್ರಾಮಿಕ ರೋಗಗಳ ಬಗ್ಗೆ ಹೆಚ್ಚಿನ ನಿಗಾವಹಿಸಿ ಇದರ ನಿಯಂತ್ರಣದ ಮಾರ್ಗೋಪಾಯಗಳನ್ನು ಜನರಿಗೆ ತಿಳಿಸಿ, ಬಯಲು ಶೌಚಕ್ಕೆ ತಿಲಾಂಜಲಿ ಹೇಳಿ, ವೈಯಕ್ತಿಕ ಶೌಚಗೃಹ ಬಳಕೆ, ಶುಚಿತ್ವ, ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ ಹಾಗೂ ಸುಸ್ಥಿರ ನೈರ್ಮಲ್ಯದ ಅಭ್ಯಾಸಗಳನ್ನು ರೂಢಿಸಿಕೊಳ್ಳಲು ಜನರಿಗೆ ಪ್ರೇರೆಪಿಸಲಾಯಿತು. ಕಾಯಿಸಿ ಹಾರಿಸಿದ ನೀರು ಕುಡಿಯಿರಿ: ಜನರು ಮನೆಯ ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಬೋರ್‌ವೆಲ್ ಅಥವಾ ಶುದ್ಧ ಕುಡಿಯುವ ನೀರಿನ ಘಟಕದಿಂದಲೇ ನೀರು ತಂದರೂ ತಪ್ಪದೇ ಕಾಯಿಸಿ ಹಾರಿಸಿ ನೀರು ಕುಡಿಯುಬೇಕು ಎಂದು ಚಿತ್ರದುರ್ಗ ತಾ.ಪಂ.ಇಓ ಹನುಮಂತಪ್ಪ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಜಾನಕೊಂಡ ಗ್ರಾಮದಲ್ಲಿ ಜರುಗಿದ ಜಾಗೃತಿ ಜಾಥಾದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಾಂಕ್ರಾಮಿಕ ರೋಗಗಳು ಗಂಭೀರ ಸ್ವರೂಪ ಪಡೆದುಕೊಳ್ಳುವ ಮುಂಚೆಯೇ ಎಲ್ಲರೂ ಎಚ್ಚೆತ್ತುಕೊಳ್ಳಬೇಕು. ಸರ್ಕಾರದ ನಿರ್ದೇಶನಗಳನ್ನು ಪಾಲನೆ ಮಾಡಬೇಕು. ನಾವು ಸ್ವಚ್ಛವಾಗಿದ್ದರೆ ನಮ್ಮ ಆರೋಗ್ಯ ಚೆನ್ನಾಗಿರುತ್ತದೆ ಎಂದರು.

ಜಾಥಾದ ಅಂಗವಾಗಿ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಘೋಷಣಾ ಫಲಕಗಳನ್ನು ಹಿಡಿದು ಮೆರವಣಿಗೆ ನಡೆಸಿ ಆರೋಗ್ಯ, ನೈರ್ಮಲ್ಯದ ಕುರಿತು ಘೋಷಣೆಗಳನ್ನು ಕೂಗಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಸಹಾಯಕ ಯೋಜನಾ ಅಧಿಕಾರಿ ಸುಮಾ, ಜಾನಕೊಂಡ ಗ್ರಾ.ಪಂ. ಅಧ್ಯಕ್ಷ ಚಂದ್ರಪ್ಪ, ಉಪಾಧ್ಯಕ್ಷೆ ರಂಗಮ್ಮ, ಪಿಡಿಓ ಮಂಜುನಾಥ ಸೇರಿದಂತೆ ಎಲ್ಲಾ ಗ್ರಾ.ಪಂ. ಸದಸ್ಯರು, ಶಿಕ್ಷಕರು, ಅಂಗನವಾಡಿ ಹಾಗೂ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಗಿರಿಯಮ್ಮನಹಳ್ಳಿ ತಿರುವಿನದಲ್ಲಿ ಎರಡು ಬೈಕ್‌ಗಳ ನಡುವೆ ಡಿಕ್ಕಿ : ಇಬ್ಬರ ಸಾವು

» ಮೊದಲ ಪುಟದಿಂದ

ಮನವಿ :ತಳಕು ಠಾಣಾ ವ್ಯಾಪ್ತಿಯ ಚಿಕ್ಕಮ್ಮನಹಳ್ಳಿ, ಗಿರಿಯಮ್ಮನಹಳ್ಳಿ, ಹಿರೇಹಳ್ಳಿ ರಾಷ್ಟ್ರೀಯ ಹೆದ್ದಾರಿ 150(ಎ) ಹಾದುಹೋಗಿದ್ದು, ವಿಶೇಷವಾಗಿ ಗಿರಿಯಮ್ಮನಹಳ್ಳಿ-ಚಿಕ್ಕಮ್ಮನಹಳ್ಳಿ ಮಾರ್ಗಮಧ್ಯದಲ್ಲಿ ಅವೈಜ್ಞಾನಿಕವಾಗಿ ತಿರುವಿದ್ದು ಇದರಿಂದ ಆಗಾಗ ಹೆಚ್ಚು ಅಪಘಾತ ಸಂಭವಿಸಿ ಪ್ರಾಣ ಹಾನಿಯಾಗುತ್ತಿದೆ. ಸಾರ್ವಜನಿಕರು ಮತ್ತು ನೊಂದವರ ಆಕ್ರೋಶದ ಹಿನ್ನೆಲೆಯಲ್ಲಿ ಅಪಘಾತದಲ್ಲಿ ಮರಣ ತಪ್ಪಿಸಲು ಜಿಲ್ಲಾ ರಕ್ಷಣಾಧಿಕಾರಿಗಳಿಗೆ ನಾಲ್ಕು ರಸ್ತೆಗಳು ಸೇರುವ ಜಾಗದಲ್ಲಿ ಅವೈಜ್ಞಾನಿಕ ತಿರುವನ್ನು ಸರಿಪಡಿಸುವಂತೆ ಮನವಿ ಮಾಡಲಾಗಿದೆ ಎಂದು ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ಮನವಿ ಮಾಡಿದ್ದಾರೆ.

### ತಟ್ಟೆ ಲೋಟ ವಿತರಣೆ



» ಚಿತ್ರದುರ್ಗ

ಮಾತೃಶ್ರೀ ವಿದ್ಯಾಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಡಾ.ವಿ.ಎಲ್.ಪ್ರಶಾಂತ್‌ರವರ ಜನ್ಮದಿನದ ಅಂಗವಾಗಿ ಐ.ಯು.ಡಿ.ಪಿ.ಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 130 ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟಕ್ಕಾಗಿ ತಟ್ಟೆ ಲೋಟಗಳನ್ನುವಿತರಿಸಲಾಯಿತು.ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸಿಕೊಳ್ಳಬಾರದೆಂದು ಸರ್ಕಾರಿ ಶಾಲೆ ಮಕ್ಕಳಿಗೆ ತಟ್ಟೆ ಲೋಟಗಳನ್ನು ವಿತರಿಸಿರುವುದು ನನ್ನ ಮನಸ್ಸಿಗೆ ಖುಷಿ ಕೊಟ್ಟಿದೆ. ಸರ್ಕಾರ ಅನೇಕ ಸೌಲಭ್ಯಗಳನ್ನು ನೀಡಿದೆ. ಎಲ್ಲವನ್ನು ಬಳಸಿಕೊಂಡು ಶಿಕ್ಷಣವಂತರಾಗಿ ಎಂದು ಡಾ.ವಿ.ಎಲ್.ಪ್ರಶಾಂತ್ ಮಕ್ಕಳಿಗೆ ತಿಳಿಸಿದರು. ಬಿ.ಆರ್.ಸಿ. ಸಂಪತ್‌ಕುಮಾರ್, ಚಂದ್ರಶೇಖರ್, ವಿ.ಎಲ್.ಪ್ರವೀಣ್, ಶಾಲೆಯ ಮುಖ್ಯ ಶಿಕ್ಷಕ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ವಚನಕಾರರಿಗೆ ಮತ್ತು ದಾಸವರೇಣ್ಯರಿಗೆ ಮಾಡಿರುವ ಅವಮಾನವೇ ಸರಿ: ಸ್ವಾಮೀಜಿ

» ಹೊಸದುರ್ಗ

ಶಾಲಾ ಶಿಕ್ಷಣ ಇಲಾಖೆ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರಹಾಕುವ ಸಲುವಾಗಿ ಪ್ರತಿವರ್ಷ 'ಪ್ರತಿಭಾ ಕಾರಂಜಿ' ಸ್ಪರ್ಧೆಯನ್ನು ನಡೆಸುತ್ತಿರುವುದು ಸ್ವಾಗತಾರ್ಹ. ಇದರಲ್ಲಿ ಕಂಠಪಾಠ ಸ್ಪರ್ಧೆ, ಲಘುಸಂಗೀತ,ಛದ್ಮವೇಶ, ಕ್ಲೇಮಾಡಲ್, ಧಾರ್ಮಿಕ ಪಠಣ ಮುಂತಾದ ವಿಭಾಗಗಳಿವೆ. ಲಘು ಸಂಗೀತ ವಿಭಾಗದಿಂದ ವಚನಕಾರರ ವಚನ ಸಾಹಿತ್ಯಮತ್ತುಹರಿದಾಸರ ದಾಸ ಸಾಹಿತ್ಯವನ್ನು ಹಾಡದಂತೆ ನಿರ್ಬಂಧ ವಿಧಿಸಿರುವುದು ಆಶ್ಚರ್ಯಕರವಾಗಿದೆ. ಇದು ವಚನಕಾರರಿಗೆಮತ್ತುದಾಸವರೇಣ್ಯರಿಗೆಮಾಡಿರುವ ಅವಮಾನವೇ ಸರಿ ಎಂದು ಸಾಣೇಹಳ್ಳಿಯ ಡಾ:ಶ್ರೀ ಪಂಡಿತರಾಧ್ಯಶಿವಾಚಾರ್ಯ ಸ್ವಾಮೀಜಿ ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಶ್ರೀಗಳು ವಚನಸಾಹಿತ್ಯ ಮತ್ತು ದಾಸಸಾಹಿತ್ಯ ಲಘುಸಂಗೀತಕ್ಕೆ ಹೇಳಿಮಾಡಿಸಿದ ರೀತಿಯಲ್ಲಿ ಇವೆ ಎನ್ನುವುದಕ್ಕೆ ಅವು ಜನಪ್ರಿಯವಾಗಿರುವುದೇ ಸಾಕ್ಷಿ. ಆದಗ್ಯೂ ಸರ್ಕಾರ ಇದನ್ನು ಪರಿಗಣಿಸದೆ ಉಭಯ ಸಾಹಿತ್ಯವನ್ನು ಕಡೆಗಣಿಸಿರುವುದು ಕನ್ನಡದ ಆತ್ಮವನ್ನೇ ಅವಮಾನಿಸಿದಂತಾಗುತ್ತದೆ. ಈ ನಿಯಮ ಕಳೆದ ಏಳೆಂಟು ವರ್ಷಗಳಿಂದಲೂ ಜಾರಿಯಲ್ಲಿದೆಯಂತೆ! ನಮಗೆ ಕಳೆದ ಎರಡು ದಿನಗಳ ಹಿಂದೆ ಅಧ್ಯಾಪಕರೊಬ್ಬರಿಂದ ಈ ವಿಷಯ ತಿಳಿಯಿತು. ಸಂಬಂಧಪಟ್ಟ ಆದೇಶಪ್ರತಿಯನ್ನು ತರಿಸಿಕೊಂಡು ನೋಡಿದಾಗ ಆಶ್ಚರ್ಯವಾಯಿತು. ಇದುವರೆಗೂ ಯಾರೊಬ್ಬರೂ ಇದನ್ನು ಪ್ರಶ್ನಿಸದಿರುವುದು ವಿಷಾದನೀಯ. ಇದೊಂದು ವ್ಯವಸ್ಥಿತ ಪಿತೂರಿಯಂತೆ ತೋರುತ್ತಿದೆ ಎಂಬ ಅಸಮಾಧಾನವನ್ನು ಹೊರಹಾಕಿರುವ ಶ್ರೀಗಳು ಎಲ್ಲ ಶಾಲೆಗಳಲ್ಲೂ ಅಗತ್ಯ ಪ್ರಮಾಣದಲ್ಲಿ ಸಂಸ್ಕೃತ, ಉರ್ದು ಶಿಕ್ಷಕರಿಲ್ಲದಿದ್ದರೂ ಧಾರ್ಮಿಕ ವಿಭಾಗದಲ್ಲಿ ಭಗವದ್ಗೀತೆ, ಕುರಾನ್ ಪಠಣಕ್ಕೆ ಅವಕಾಶವನ್ನು ನೀಡಿರುವಾಗ, ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿರುವಾಗ ಕನ್ನಡದ ವಚನಗಳಿಗೆ, ದಾಸ ಸಾಹಿತ್ಯಕ್ಕೆ ಏಕೆ ಅವಕಾಶ ನೀಡಿಲ್ಲ ಎನ್ನುವುದು ಪ್ರಶ್ನಾರ್ಹವಾಗಿದೆ. ಪ್ರತ್ಯೇಕ ವಿಭಾಗದ ಅಡಿಯಲ್ಲಿ ವಚನ ಸಾಹಿತ್ಯ ಮತ್ತು ದಾಸಸಾಹಿತ್ಯಕ್ಕೂ ಅವಕಾಶ ನೀಡಿದರೆ ಮಕ್ಕಳ ಮನೋಭೂಮಿಕೆಯಲ್ಲಿ ಸತ್ವಯುತ, ವೈಚಾರಿಕ, ವೈಜ್ಞಾನಿಕ ಬೀಜ ಬಿತ್ತಿದಂತಾಗುತ್ತದೆ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಶಿಕ್ಷಣ ಸಚಿವರು, ಅಧಿಕಾರಿಗಳು ಕೂಡಲೇಎಚ್ಚೆತ್ತು ಆಗಿರುವ ದೋಷಗಳನ್ನು ಸರಿಪಡಿಸಬೇಕೆಂದು ಶ್ರೀಗಳು ಆಗ್ರಹ ಪೂರ್ವಕವಾಗಿ ಒತ್ತಾಯ ಮಾಡಿದ್ದಾರೆ.

# ಭೂ ಸುಧಾರಣೆ ಮೂಲಕ ಎಲ್ಲರಿಗೂ ಸಮಾನ ಹಕ್ಕು ನೀಡಿದ ಸಾಮಾಜಿಕ ಹರಿಕಾರ: ಸಚಿವ

» ದಾವಣಗೆರೆ

ದೇವರಾಜ ಅರಸುರವರು ಭೂ ಸುಧಾರಣೆ ಕಾನೂನನ್ನು ಕರ್ನಾಟಕದಲ್ಲಿ ಜಾರಿಗೆ ತಂದು ಎಲ್ಲರಿಗೂ ಸಮಾನತೆ ದೊರೆಯುವಂತೆ ಮಾಡಿದರು ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ತಿಳಿಸಿದರು.

ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಇವರ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜರುಗಿದ ಸಾಮಾಜಿಕ ಪರಿವರ್ತನೆಯ ಹರಿಕಾರ ಹಿಂದುಳಿದ ವರ್ಗಗಳ ಧೀಮಂತ ನಾಯಕ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ ದೇವರಾಜ ಅರಸುರವರ 108ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಗಸ್ಟ್ 20ರಂದು ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ 108ನೇ ಜನ್ಮದಿನ. ದೇವರಾಜ ಅರಸು ಅವರನ್ನು ಸಾಮಾಜಿಕ ನ್ಯಾಯದ ಹರಿಕಾರ ಎಂದು ಕರೆಯಲಾಗುತ್ತದೆ. ದೇವರಾಜ ಅರಸು ಕರ್ನಾಟಕ ರಾಜ್ಯದ ಅಪರೂಪದ ರಾಜಕಾರಣಿ. ಅರಸು ಬಡವರ ಮತ್ತು ಸಾಮಾಜಿಕ ನ್ಯಾಯದ ಪರವಾಗಿದ್ದರು. ಭೂ ಸುಧಾರಣೆ ಕಾಯಿದೆ ಜಾರಿಗೆ ತಂದು ಉಳುವವನೇ ಭೂ ಒಡೆಯ ಎಂಬ ಕಾಯ್ದೆಯನ್ನು ತರುವ ಮೂಲಕ ಸಮಾಜದಲ್ಲಿ ಎಲ್ಲರಿಗೂ ಸಮಾನತೆಯನ್ನು ಮೆರೆದಿದ್ದಾರೆ ಎಂದರು. ಮಾಯಕೊಂಡ ಶಾಸಕ ಕೆ. ಎಸ್ ಬಸವಂತಪ್ಪ ಮಾತನಾಡಿ ಬಡವರು ಸಹ ರಾಜಕೀಯ ಮತ್ತು ಇನ್ನಿತರ ಯಾವುದೇ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ ಎಂದರೆ ಇದಕ್ಕೆ ಹಿಂದುಳಿದ ವರ್ಗಗಳ ಧೀಮಂತ ನಾಯಕ, ಸಾಮಾಜಿಕ ಪರಿವರ್ತನೆಯ ಹರಿಕಾರ ದೇವರಾಜ್ ಅರಸು ಅವರ ಆಡಳಿತ ವೈಖರಿಯೇ ಕಾರಣವಾಗಿದೆ.





ಮಕ್ಕಳು ದೇಶದ ಮುಂದಿನ ಭವಿಷ್ಯದ ನಿರ್ಮಾಣಕಾರರು, ಆದ್ದರಿಂದ ವಿದ್ಯಾರ್ಥಿಗಳು ರಾಜ್ಯಕ್ಕೆ ಉತ್ತಮ ಆಡಳಿತ ನೀಡಿದ ದೇವರಾಜ್ ಅರಸು ಅವರ ಚಿಂತನೆ ಮತ್ತು ಆಲೋಚನೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಇಂದು ಕಡುಬಡವರು ಸಹ ಭೂಮಿಯನ್ನು ಹೊಂದಿದ್ದಾರೆ ಎಂದರೆ ಇದಕ್ಕೆ ಕಾರಣ ದೇವರಾಜ್ ಅರಸು ಎಂದರು.

ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಮಾತನಾಡಿ ದೇವರಾಜ ಅರಸು ಅವರು ಕರ್ನಾಟಕ ಕಂಡ ಬಹು ವ್ಯಕ್ತಿತ್ವದ ಮತ್ತು ಅತ್ಯಂತ ವರ್ಣ ರಂಜಿತ ಮುಖ್ಯಮಂತ್ರಿಯಾಗಿದ್ದರು. ಅವರು

ಅಧಿಕಾರದಲ್ಲಿದ್ದಾಗ ಹಿಂದುಳಿದ ಸಮುದಾಯಗಳಿಗೆ ನ್ಯಾಯ ಕೊಡಿಸಲು ಪ್ರಯತ್ನ ಮಾಡಿದರು. ಮಲ ಹೊರುವ ಪದ್ಧತಿ ನಿರ್ಮೂಲನೆ ಮಾಡಿ ಜೀತಪದ್ಧತಿಗೆ ಮಂಗಳ ಹಾಡಿದರುಎಲ್ಲರಿಗೂ ಸಮಪಾಲು ಸಮಬಾಳು ಎಂಬ ದ್ಯೇಯವಾಕ್ಯದಡಿ ಸಮ ಸಮಾಜವನ್ನು ನಿರ್ಮಾಣ ಮಾಡಲು ಅತ್ಯಂತ ಪರಿಶ್ರಮದಿಂದ ಕಾರ್ಯನಿರ್ವಹಿಸಿ, ಯಶಸ್ವಿಯಾದಂತಹ ನಾಯಕರಾಗಿದ್ದರು. ಸನ್ಮಾನ; ದಾವಣಗೆರೆ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪದವಿಯಲ್ಲಿ ಬಂಗಾರ ಪದಕ ಪಡೆದ ವಿದ್ಯಾರ್ಥಿಗಳಾದ ಹಾಲಮ್ಮ (ಎಂಕಾಂ), ಮಂಜಮ್ಮ(ಕನ್ನಡ), ವಿದ್ಯಾಶ್ರೀ(ಎಂ. ಟೆಕ್), ಪವನ್ ಎಲ್(ಕನ್ನಡ), ಕಲ್ಯಾಣ್ ಕುಮಾರ್ ಹೆಚ್ ಇವರಿಗೆ ಸನ್ಮಾನಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಅರುಣ್, ಅಪರ ಜಿಲ್ಲಾಧಿಕಾರಿ ಪಿಎನ್ ಲೋಕೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಲ್ಲನಾಯ್ಕ್, ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ, ದಾವಣಗೆರೆ ತಾಲೂಕು ತಹಸಿಲ್ದಾರ್ ಡಾ. ಅಶ್ವಥ್, ಹಿಂದುಳಿದ ವರ್ಗಗಳ ಇಲಾಖೆಯ ಅಧಿಕಾರಿ ಗಾಯಿತ್ರಿ, ಮಹಾನಗರ ಪಾಲಿಕೆಯ ಸದಸ್ಯ ಚಮನ್ ಉಪಸ್ಥಿತರಿದ್ದರು.

## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಅರಸು ಜಯಂತಿ

» ಚಿತ್ರದುರ್ಗ

ಮಾಜಿ ಮುಖ್ಯಮಂತ್ರಿಗಳಾದ ದೇವರಾಜ್ ಅರಸ್ ಹಾಗೂ ಮಾಜಿ ಪ್ರದಾನಿ ರಾಜೀವ ಗಾಂಧಿಯವರ ಆದರ್ಶ ಮತ್ತು ತತ್ವಗಳನ್ನು ಇಂದಿನ ಯುವ ಜನಾಂಗ ಅಳವಡಿಕೆ ಮಾಡಿಕೊಳ್ಳಭೇಕಲ್ಲದೆ, ಈ ಇಬ್ಬರು ನಾಯಕರು ದೇಶಕ್ಕೆ ಸಾಮಾಜಿಕ ನ್ಯಾಯವನ್ನು ನೀಡುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದ್ದರು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಭಾನುವಾರ ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಸಮಿತಿ, ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆ ಹಾಗೂ ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಮಾಜಿ ಪ್ರಧಾನಿ ಭಾರತ ರತ್ನ ದಿವಂಗತ ರಾಜೀವ ಗಾಂಧಿಯವರ 79ನೇ ಹಾಗೂ ಮಾಜಿ ಮುಖ್ಯಮಂತ್ರಿ ದಿವಂಗತ ದೇವರಾಜ್ ಅರಸು ರವರ 108ನೇ ಜನ್ಮದಿನಾಚರಣೆಯಲ್ಲಿ ಭಾಗವಹಿಸಿ ಈ ಇಬ್ಬರು ಮಹಾನೀಯರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು,

ರಾಜೀವಗಾಂಧಿಯವರು ದೇಶದ ಏಕತೆ ಮತ್ತು ಅಖಂಡತೆಗೆ ತಮ್ಮ ಪ್ರಾಣವನ್ನೇ ನೀಡಿದ್ದಾರೆ. ಈ ಇಬ್ಬರು ಮಹಾನೀಯರು ಕಾಂಗ್ರೆಸ್ ಪಕ್ಷಕ್ಕೆ ಮಾತ್ರವಲ್ಲದೆ ಇಡಿ ರಾಷ್ಟ್ರಕ್ಕೆ ಸಾಮಾಜಿಕ ನ್ಯಾಯವನ್ನು ನೀಡಿದ್ದಾರೆ. ಅರಸು ರವರು ಬಡ ಕುಟುಂಬದಲ್ಲಿ ಜನಿಸಿದ್ದರೂ ಸಹಾ ಅವರಲ್ಲಿ ಸಮಾಜಿಕ ಕಳಕಳಿ ಈ ವರೆವಿಗೂ ಇದ್ದು ಅದನ್ನು ತುಂಬಲು ಸಾಧ್ಯವಾಗಿಲ್ಲ ಇಂದಿನ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರೂ ಆ ಹಾದಿಯಲ್ಲಿ ನಡೆಯುತ್ತಾ ಅರಸು ರವರ




ಸಿದ್ಧಾಂತವನ್ನು ಜಾರಿ ಮಾಡುತ್ತಿದ್ದಾರೆ ಎಂದ ಅವರು, ಇದರೊಂದಿಗೆ ಡಿ.ಕೆ.ಶಿವಕುಮಾರ್ ರವರು ಸಹಾ ಕಳೆದ ಹತ್ತು ವರ್ಷಗಳಿಂದ ಪಕ್ಷದಲ್ಲಿ ಸಾಮಾಜಿಕ ನ್ಯಾಯವನ್ನು ನೀಡುತ್ತಿದ್ದಾರೆ ಎಂದರು. ಈ ಇಬ್ಬರು ಮಹಾನೀಯರು ಆದರ್ಶ ಮತ್ತು ತತ್ವಗಳನ್ನು ಇಂದಿನ ಯುವ ಜನಾಂಗ ತಮ್ಮ ಜೀವನದಲ್ಲಿ ಅಳವಡಿಕೆಯನ್ನು ಮಾಡಿಕೊಳ್ಳಬೇಕಿದೆ. ಇವರ ಅಧಿಕಾರದ ಅವಧಿಯಲ್ಲಿ ಕಟ್ಟ ಕಡೆಯ ವ್ಯಕ್ತಿಗೂ ಸಹಾ ನ್ಯಾಯವನ್ನು ಕೂಡಿಸುವ ಕಾರ್ಯವನ್ನು ಮಾಡಿದರು. ಭೂ ಸುದಾರಣೆ ಕಾಯ್ದೆಯನ್ನು ಜಾರಿ ಮಾಡುವುದರ ಮೂಲಕ ಸಾವಿರಾರು ಎಕರೆ ಭೂ ಒಡೆಯರಾಗಿದ್ದವರಿಗೆ ಭೂಯನ್ನು ಉಳುವವನೇ ಒಡೆಯ ಎಂದು ಮಾಡುವುದರ ಮೂಲಕ ಆತನನ್ನು ಭೂ ಒಡೆಯನನ್ನಾಗಿ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಸಾಮಾಜಿಕ ಹಾವನೂರು ವರದಿಯನ್ನು ಜಾರಿ ಮಾಡುವುದರ ಮೂಲಕ ಸಣ್ಣ ಜನಾಂಗದವರಿಗೆ ಸಹಾ ನ್ಯಾಯವನ್ನು ನೀಡಿದ್ದಾರೆ ಎಂದು ಸುಧಾಕರ್ ತಿಳಿಸಿದರು.

ಅಂದು ಅವರು ಜಾರಿ ಮಾಡಿದ ವಿವಿಧ ರೀತಿಯ ಕಾಯ್ದೆಗಳು ಇಂದಿಗೂ ಸಹಾ ಅನ್ವಯವಾಗುತ್ತಿದ್ದು, ಬಡ ಜನತೆಗೆ ದಾರಿ ದೀಪವಾಗಿದೆ. ನಾನು ಇಲ್ಲಿ ನಿಂತುಕೊಂಡಿದ್ದೇನೆ ನಾನು ಸಚಿವನಾಗಿದ್ದೇನೆ ಶಾಸಕನಾಗಿದ್ದೇನೆ ಎಂದರೆ ಅರಸು ರವರು ಕಾರಣರಾಗಿದ್ದಾರೆ. ಅವರ ಆದರ್ಶಗಳು ಮತ್ತು ತತ್ವಗಳು ಕಾಂಗ್ರೆಸ್ ಪಕ್ಷಗಳಿಗೆ ಉಡುಗೂರೆಯಾಗಿದೆ. ಅವರ ಚಿಂತನೆಯನ್ನು ಅಳವಡಿಸಿಕೊಳ್ಳುವ ಅನಿವಾರ್ಯತೆ ಇದೆ. ಎಂದು ತಿಳಿಸಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠವಾಗಿ ಕಟ್ಟುವ ಅನಿವಾರ್ಯತೆ ಇದೆ. ಕಾಂಗ್ರೆಸ್ ಪಕ್ಷ ಗಟ್ಟಿಯಾದಷ್ಟು ಬಡವರು ಎಸ್.ಸಿ.ಎಸ್.ಟಿ.ಯವರಿಗೆ ನ್ಯಾಯ ಸಿಗಲಿದೆ. ಕಾಂಗ್ರೆಸ್ ಪಕ್ಷವೊಂದೇ ಸಾಮಾಜಿಕ ನ್ಯಾಯವನ್ನು ನೀಡಲು ಸಾಧ್ಯವಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ಕಾಂಗ್ರೆಸ್ ಪಕ್ಷ ಮಾತ್ರ ಇತ್ತು ಎಂದರು.

## ತಾಲ್ಲೂಕು ಮಾದಿಗ ನೌಕರರ ಸಂಘದಿಂದ ಸಚಿವರಿಗೆ ಸನ್ಮಾನ




» ಚಳ್ಳಕೆರೆ

ಮಾದಿಗ ಸಮುದಾಯದ ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ, ನಿವೃತ್ತ ನೌಕರರ ಸನ್ಮಾನ ಹಾಗೂ ಚುನಾಯಿತ ಸಚಿವರು ಹಾಗೂ ಶಾಸಕರಿಗೆ ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಈ ಸಮುದಾಯದ ಪ್ರಗತಿಗೆ ಪ್ರಾಮಾಣಿಕ ಯತ್ನ ನಡೆಸುತ್ತಿದೆ. ಸಮುದಾಯವೂ ಸೇರಿದಂತೆ ಎಲ್ಲರೂ ಸಹಕಾರ ನೀಡಬೇಕೆಂದು ತಾಲ್ಲೂಕು ಮಾದಿಗ ನೌಕರರ ಸಾಂಸ್ಕೃತಿಕ ಸಂಘ ಅಧ್ಯಕ್ಷ ಡಿ.ದಯಾನಂದ ತಿಳಿಸಿದರು.

ಅವರು, ನಗರದ ಸರ್ಕಾರಿ ನೌಕರರ ಭವನದಲ್ಲಿ ಭಾನುವಾರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಕಾರ್ಯಕ್ರಮ ಸೆ.3ರ ಭಾನುವಾರ ನಗರದ ಜೈನ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕಾರ್ಯಕ್ರಮ ಉದ್ಘಾಟಿಸುವರು ಎಂದರು.

ಸಂಘದ ಕಾರ್ಯದರ್ಶಿ ಡಿ.ಶ್ರೀನಿವಾಸ್ ಮಾತನಾಡಿ, ನಮ್ಮ ಸಂಘದ ಕಾರ್ಯಕ್ರಮಗಳಿಗೆ ಸದಾ ಪ್ರೋತ್ಸಾಹ ನೀಡುತ್ತಾ ಬಂದಿರುವ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ, ಆಹಾರ ಮತ್ತು ನಾಗರೀಕ ಸಚಿವ ಕೆ.ಎಚ್.ಮುನಿಯಪ್ಪ, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ) ಯವರನ್ನು ಸಹ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು. ಎಸ್‌ಎಸ್‌ಎಲ್‌ಸಿಯಲ್ಲಿ ಶೇ.85, ಪಿಯುಸಿಯಲ್ಲಿ ಶೇ.75 ಅಂಕ ಪಡೆದ ವಿದ್ಯಾರ್ಥಿಗಳು ಅಭಿನಂದನೆಗೆ ಅರ್ಹರಾಗಿದ್ದಾರೆ. ಕಾರ್ಯಕ್ರಮದ ಮೂಲಕ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ತುಂಬುವ ದೃಷ್ಠಿಯಿಂದ ಈ ಕಾರ್ಯಕ್ರಮ ಆಯೋಜಿಸಿದೆ ಎಂದರು.

## ಪ್ರಮುಖ ಸುದ್ದಿ

### ಗ್ರಾಮೀಣ ಭಾಗಗಳಲ್ಲಿ ಸ್ವಚ್ಚತೆ ಮತ್ತು ನೈರ್ಮಲ್ಯವನ್ನು ಸಂರಕ್ಷಣೆ ಮಾಡುವ ಜನ ಜಾಗೃತಿ ಜಾಥ

# ಆಡಳಿತದೊಂದಿಗೆ ಸಾರ್ವಜನಿಕರೂ ಕೈಜೋಡಿಸಿ

» ಚಳ್ಳಕೆರೆ

ಗ್ರಾಮೀಣ ಪ್ರದೇಶಗಳಲ್ಲಿ ಉತ್ತಮ ನೈರ್ಮಲ್ಯ ಕಾಪಾಡುವ ಮೂಲಕ ಗ್ರಾಮದ ಜನರು ಯಾವುದೇ ರೋಗಕ್ಕೆ ತುತ್ತಾಗದಂತೆ ಜಾಗ್ರತೆ ವಹಿಸಲಾಗುವುದು. ಉತ್ತಮ ಪರಿಸರವನ್ನು ಕಾಪಾಡಿಕೊಳ್ಳುವ ಮೂಲಕ ನಾವೆಲ್ಲರೂ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕೆಂದು ಚನ್ನಮ್ಮನಾತಿಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಿ.ಆನಂದಕುಮಾರ್ ತಿಳಿಸಿದರು.

ಅವರು, ಶನಿವಾರ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಆಡಳಿತ ವತಿಯಿಂದ ಹಮ್ಮಿಕೊಂಡಿದ್ದ ವಿಶೇಷ ಅಭಿಯಾನ ಯೋಜನೆಯಡಿಯ ಸ್ವಚ್ಚತೆ ಮತ್ತು ನೈರ್ಮಲ್ಯ ಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಿಗೆ ಸ್ವಚ್ಚತೆಯ ಬಗ್ಗೆ ಜಾಗೃತಿ ಮೂಡಿಸುವುದೇ ಈ ಕಾರ್ಯಕ್ರಮದ ಉದ್ದೇಶ. ಗ್ರಾಮ ಪಂಚಾಯಿತಿ ಆಡಳಿತ ಗ್ರಾಮೀಣ ಭಾಗದ ಜನರ ಆರೋಗ್ಯವೂ ಸೇರಿದಂತೆ ಎಲ್ಲಾ ವಿಚಾರಗಳಲ್ಲೂ ಜಾಗ್ರತೆ ವಹಿಸಲಾಗುವುದು ಎಂದರು.



ಚಳ್ಳಕೆರೆ ತಾಲ್ಲೂಕಿನ ಚನ್ನಮ್ಮನಾತಿಹಳ್ಳಿ ಗ್ರಾಮ ಪಂಚಾಯಿತಿ ಹಮ್ಮಿಕೊಂಡಿದ್ದ ವಿಶೇಷ ಅಭಿಯಾನ ಯೋಜನೆಯಡಿಯ ಸ್ವಚ್ಚತೆ ಮತ್ತು ನೈರ್ಮಲ್ಯ ಜಾಗೃತಿ ಜಾಥ ನಡೆಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೇದಮೂರ್ತಿ, ಸರ್ಕಾರದ ಸೂಚನೆ ಮೇರೆಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲೂ ಸಹ ಜಾಗೃತಿ ಜಾಥ ಮೂಲಕ ಸ್ವಚ್ಚತೆ ಮತ್ತು ನೈರ್ಮಲ್ಯ ಸಂರಕ್ಷಣೆಯ ಬಗ್ಗೆ ಮಾರ್ಗದರ್ಶನ ನೀಡಲಾಗುತ್ತಿದೆ. ಪಂಚಾಯಿತಿ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರು ಈ ಕಾರ್ಯಕ್ರಮಕ್ಕೆ ಹೆಚ್ಚು ಸಹಕಾರ ನೀಡುತ್ತಿದ್ದಾರೆ. ಪ್ರತಿ ಗ್ರಾಮಗಳಲ್ಲೂ ಸ್ವಚ್ಚತಾ ಅಭಿಯಾನ ಕಾರ್ಯಕ್ರಮ ನಡೆಸಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ನಿರಂತರವಾಗಿ ನಡೆಯಲಿದೆ ಎಂದರು.

ಸದಸ್ಯ ಶಿವಣ್ಣ, ಆರೋಗ್ಯ ಇಲಾಖೆಯ ನಾಗಭೂಷಣ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮಹಂತೇಶ್, ಸುಜಾತಮ್ಮ, ಹನುಮಕ್ಕ, ರಂಗಮ್ಮ,ಮ ಶಿಕ್ಷಕ ಸಂತೋಷ್, ಗ್ರಾಮಸ್ಥರಾದ ವೆಂಕಟೇಶ್, ಆಂಜನೇಯ, ನವೀನ್, ರಮೇಶ್, ವೀರಭದ್ರಪ್ಪ, ವಿಶ್ವನಾಥ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಗುಣಮಟ್ಟದ ಶಿಕ್ಷಣಕ್ಕೆ ನಮ್ಮ ಸರ್ಕಾರ ಹೆಚ್ಚು ಆದ್ಯತೆ ನೀಡುತ್ತಿದೆ: ಬಸವರಾಜು ವಿ ಶಿವಗಂಗಾ



» **ಚನ್ನಗಿರಿ**

ನಮ್ಮ ಸರ್ಕಾರ ಅಭಿವೃದ್ಧಿ ಜೊತೆಗೆ ಶಿಕ್ಷಣಕ್ಕೂ ಹೆಚ್ಚು ಮಹತ್ವ ನೀಡುತ್ತಿದೆ. ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಜೊತೆಗೆ ಉತ್ತಮ ಸೌಲಭ್ಯಗಳನ್ನು ಕಲ್ಪಿಸಿಕೊಡುತ್ತಿದೆ ಎಂದು ಶಾಸಕ ಬಸವರಾಜು ವಿ ಶಿವಗಂಗಾ ತಿಳಿಸಿದರು. ತಾಲ್ಲೂಕಿನ ಹಿರೇಕೋಗಲೂರು ಗ್ರಾಮದ ಶ್ರೀ ತರಳಬಾಳು ಜಗದ್ಗುರು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ( ಪ್ರೌಢ ಶಾಲಾ ವಿಭಾಗ) ಸ್ಮಾರ್ಟ್ ಕ್ಲಾಸ್ ಉದ್ಘಾಟಿಸಿ ಮಾತನಾಡಿದರು. ಈಗಾಗಲೇ ತಾಲ್ಲೂಕಿನಲ್ಲಿ ಹಲವು ಗ್ರಾಮಗಳಲ್ಲಿ ಸರ್ಕಾರಿ ಶಾಲೆಗಳಿಗೆ ನೂತನ ಕೊಠಡಿಗಳನ್ನ ಉದ್ಘಾಟನೆ ಮಾಡಲಾಗಿದೆ. ಇನ್ನೂ ಕೆಲ ಶಾಲೆಗಳಿಗೆ ಹೊಸ ಕೊಠಡಿಗಳ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು. ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಜೊತೆಗೆ ಸೌಕರ್ಯಗಳನ್ನು ಕಲ್ಪಿಸಿ ಮಕ್ಕಳಿಗೆ ಯಾವುದೇ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಲಾಗುವುದೆಂದರು. ನಾವೆಲ್ಲಾ ಸಕಾರಿ ಶಾಲೆಗಳಲ್ಲೇಓದಿದ್ದುಸರ್ಕಾರಿಶಾಲೆಯ2ಲ್ಲಿಉತ್ತಮ ಶಿಕ್ಷಕರಿದ್ದಾರೆ, ಮಕ್ಕಳು ಮೊದಲಿನಿಂದಲೇ ಚನ್ನಾಗಿ ವಿದ್ಯಾಭ್ಯಾಸ ಮಾಡಿ ತಂದೆ ತಾಯಿಗಳಿಗಳಿಗೆ ಹಾಗೂ ಶಾಲೆ ಗ್ರಾಮಕ್ಕೆ ಒಳ್ಳೆ ಹೆಸರನ್ನು ತರಬೇಕೆಂದರು. ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷರಾದ ಸುಮಾ ಶಿವಕುಮಾರ್, ಉಪಾಧ್ಯಕ್ಷರಾದ ಸುಮಾ ಕೃಷ್ಣ ಮೂರ್ತಿ, ಎ[illegible]ಡಿಎಂಸಿ ಅಧ್ಯಕ್ಷರಾದ ಸುರೇಶ್ ಹಾಗೂ ಪ್ರಾಚಾರ್ಯರಾದ ಶ್ರೀಮತಿ ಹೇಮಾವತಿ ಮುಖ್ಯಶಿಕ್ಷಕರಾದ ಪ್ರಭಾಕರ್, ಗ್ರಾಮದ ಮುಖಂಡರಾದ ಬಿಜಿ ಸ್ವಾಮಿ, ಶರತ್, ಕೆಪಿ ವೆಂಕಟೇಶ್ ಸೇರಿಂದತೆ ಹಲವರು ಉಪಸ್ಥಿತರಿದ್ದರು.

## ಕುಕ್ಕವಾಡೇಶ್ವರಿ ಶ್ರಾವಣ ಮಾಸದ ಪೂಜೆ ನಾಳೆ

» **ಚಿತ್ರದುರ್ಗ**

ನಗರದ ಹೊರವಲಯ ಚಂದ್ರವಳ್ಳಿಯ ಹುಲೆಗುಂದಿಯಲ್ಲಿರುವ ಕುಕ್ಕವಾಡೇಶ್ವರಿ ಅಮ್ಮನವರ ಶ್ರಾವಣ ಮಾಸದ ಪೂಜಾ ಮಹೋತ್ಸವ ಮೇದಾರ ಸಮಾಜದಿಂದ ಆ.22 ರಂದು ಬೆಳಿಗ್ಗೆ 10–30 ರಿಂದ 11–20 ರವರೆಗೆ ವಿಜೃಂಭಣೆಯಿಂದ ನಡೆಯಲಿದೆ. ದಿವ್ಯ ಸಾನಿಧ್ಯವನ್ನು ಮೇದಾರ ಕೇತೇಶ್ವರ ಮಠದ ಇಮ್ಮಡಿ ಬಸವಪ್ರಭು ಮೇದಾರ ಕೇತೇಶ್ವರ ಸ್ವಾಮಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ನಗರಸಭೆ ಸದಸ್ಯರುಗಳಾದ ಕೆ.ಬಿ.ಸುರೇಶ್, ಡಿ.ಮಲ್ಲಿಕಾರ್ಜುನ್, ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ, ಜಿಲ್ಲಾ ಕುರುಬರ ಸಮಾಜದ ಅಧ್ಯಕ್ಷ ಶ್ರೀರಾಮ್ ಇವರುಗಳು ಆಗಮಿಸಲಿದ್ದಾರೆ. ಮೇದಾರ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕುಕ್ಕವಾಡೇಶ್ವರಿ ಅಮ್ಮನವರ ಕೃಪೆಗೆ ಪಾತ್ರರಾಗುವಂತೆ ಮೇದಾರ ಸಮಾಜದ ಕಾರ್ಯದರ್ಶಿ ರಾಘವೇಂದ್ರ ಮನವಿ ಮಾಡಿದ್ದಾರೆ.

## ಇಸ್ಪೀಟ್ ಜೂಜಾಟ ಏಳು ಜನರ ಪ್ರಕರಣ

» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಪೊಲೀಸ್ ಠಾಣಾ ವ್ಯಾಪ್ತಿಯ ವಡೇರಹಳ್ಳಿಯ ಸಾರ್ವಜನಿಕ ರಸ್ತೆಯಲ್ಲಿ ಜೂಜಾಟವಾಡುತ್ತಿದ್ದ ಏಳು ಜನರನ್ನು ವಶಕ್ಕೆ ಪಡೆದು ಅವರಿಂದ ಜೂಜಾಟಕ್ಕೆ ಪಣವಾಗಿಟ್ಟಿದ್ದ 12.350ರೂ ಹಣವನ್ನು ವಶ ಪಡಿಸಿಕೊಳ್ಳಲಾಗಿದೆ. ತಳಕು ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ಈ ಬಗ್ಗೆ ಮಾಹಿತಿ ನೀಡಿ, ಜಿಲ್ಲಾ ರಕ್ಷಣಾಧಿಕಾರಿಗಳು ಮತ್ತು ಉಪವಿಭಾಗಾಧಿಕಾರಿಗಳ ಮಾರ್ಗದರ್ಶನದಲ್ಲಿ ಖಚಿತ ವರ್ತಮಾನದ ಮೇರೆಗೆ ಪರಶುರಾಮಪುರ ಠಾಣಾ ಪಿಎಸ್ಐ ಮತ್ತು ಸಿಬ್ಬಂದಿ ವರ್ಗ ಶನಿವಾರ ಮಧ್ಯಾಹ್ನ ವಡೇರಹಳ್ಳಿ ಗ್ರಾಮದ ಸಾರ್ವಜನಿಕ ರಸ್ತೆಯಲ್ಲಿ ಜೂಜಾಟವಾಡುತ್ತಿದ್ದ ಕರಿಯಣ್ಣ, ಇತರೆ ಆರು ಜನರನ್ನು ವಶಕ್ಕೆ ಪಡೆದು ಜೂಜಾಟದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ಠಾಣಾಧಿಕಾರಿ ಎಚ್.ಏಕಾಂತರೆಡ್ಡಿ ಪ್ರಕರಣ ದಾಖಲಿಸಿದ್ದಾರೆ.

## ಮಡಿವಾಳ ಸಂಘದ ಅಧ್ಯಕ್ಷರಾಗಿರಾಮಕೃಷ್ಣಪ್ಪ

» **ಹೊಸದುರ್ಗ**

ಶ್ರೀ ವೀರ ಮಡಿವಾಳ ಮಾಚಿದೇವ ಸಂಘದ ತಾಲೂಕು ಅಧ್ಯಕ್ಷರಾಗಿ ಬಿ.ಆರ್.ರಾಮಕೃಷ್ಣಪ್ಪ ಆಯ್ಕೆಯಾಗಿದ್ದಾರೆ.ರಾಮಕೃಷ್ಣಪ್ಪ ಅವರು ಸುಮಾರು ವರ್ಷಗಳಿಂದಲೂ ಸಹಾ ಸಮಾಜದ ಸಂಘಟನೆಗಳಲ್ಲಿ ತೊಡಗಿಸಿಕೊಂಡಿದ್ದು ಜೊತೆಗೆ ಸಮಾಜ ಸೇವೆಯನ್ನ ಮಾಡುತ್ತಿರುವ ಇವರು ಎರಡನೇ ಬಾರಿಗೆ ಅಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ.

# ಲೋಕದೊಳಲು: ರಂಗನಾಥಸ್ವಾಮಿ ಬೆಟ್ಟದ ಮೇಲಿನ ನೂತನ ದೇವಾಲಯ ಕಾಮಗಾರಿಗೆ ಶಂಕುಸ್ಥಾಪನೆ


» **ಹೊಳಲ್ಕೆರೆ**

ಒಳ್ಳೆ ಕೆಲಸ ಮಾಡಿದರೆ ಮನುಷ್ಯ ಜನ್ಮ ಪ್ರಾಪ್ತಿಯಾಗುತ್ತದೆ. ದೈವ ಕೃಪೆಯಿದ್ದರೆ ಉತ್ತಮ ಸ್ಥಿತಿಯಲ್ಲಿರಬಹುದು ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ಲೋಕದೊಳಲು ಗ್ರಾಮದಲ್ಲಿ ದೊಡ್ಡಹೊಟ್ಟೆ ರಂಗನಾಥಸ್ವಾಮಿಯ ಬೆಟ್ಟದ ಮೇಲಿನ ನೂತನ ದೇವಾಲಯ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ದಿನೆ ದಿನೆ ಭಕ್ತರ ಸಂಖ್ಯೆ ಜಾಸ್ತಿಯಾಗುತ್ತಿರುವುದರಿಂದ ದೇವಸ್ಥಾನಕ್ಕೆ ಬಂದು ಹೋಗುವವರಿಗೆ ಅನುಕೂಲವಾಗಲಿ ಎನ್ನುವ ದೃಷ್ಟಿಯಿಂದ ಮೆಟ್ಟಿಲು ನಿರ್ಮಾಣಕ್ಕೆ ಮೂರು ಕೋಟಿ ರೂ.ಗಳನ್ನು ಮಂಜೂರು ಮಾಡಿದ್ದೇನೆ. ನೀವುಗಳು ಅಂದುಕೊಂಡಷ್ಟು ಸುಲಭವಲ್ಲ. ದೊಡ್ಡ ಸರೋವರದ ರೀತಿಯಲ್ಲಿತ್ತು. ಈ ಕೆಲಸ ಮಾಡಲು ಬರುವವರೆಲ್ಲಾ ಅಬ್ಬಬ್ಬಾ ಎಂದು ಹೆದರಿಕೊಂಡು ವಾಪಸ್ ಹೋಗುತ್ತಿದ್ದರು.





ಚಿಕ್ಕಂದವಾಡಿಯ ಗುತ್ತಿಗೆದಾರ ರಾಜಣ್ಣನನ್ನು ಕರೆಸಿಕೊಂಡು ಮೆಟ್ಟಿಲು ನಿರ್ಮಾಣ ಮಾಡುವಂತೆ ಹೇಳಿದ ಪರಿಣಾಮ ಒಪ್ಪಿಕೊಂಡಿದ್ದಾನೆ. ಸರ್ಕಾರದಿಂದ ಹಣ ಕೊಡಿಸುತ್ತೇನೆ. ವೈಯಕ್ತಿಕವಾಗಿಯೂ ಹಣಕಾಸಿನ ನೆರವು ನೀಡುತ್ತೇನೆ. ದೊಡ್ಡ ಪ್ರಾಜೆಕ್ಟ್ ಹಾಕಿಕೊಂಡಿದ್ದೀರಿ. ಐದು ಕೋಟಿ ರೂ.ವೆಚ್ಚದಲ್ಲಿ ದೇವಸ್ಥಾನ ನಿರ್ಮಾಣ ಮಾಡುವಷ್ಟು ಅವಕಾಶವಿಲ್ಲ. ಹಾಸಿಗೆಯಿದ್ದಷ್ಟು ಕಾಲು ಚಾಚಬೇಕು ಎಂದು ತಿಳಿಸಿದರು.

ಪುಣ್ಯ ಸಾರ್ಥಕವಾದ ಕೆಲಸ ಮಾಡಿದರೆ ಪರಮಾತ್ಮ ಒಂದಲ್ಲ ಒಂದು ರೀತಿಯಲ್ಲಿ ಕಾಪಾಡುತ್ತಾನೆ. ಹಾಗಾಗಿ ದೇವಸ್ಥಾನಕ್ಕೆ ಮೆಟ್ಟಿಲು ನಿರ್ಮಿಸಲು ಹಣ ಮಂಜೂರು ಮಾಡಿದ್ದೇನೆ. ಟಾರ್ ರಸ್ತೆಗೆ ಐವತ್ತು ಲಕ್ಷ ರೂ.ಗಳನ್ನು ಇಟ್ಟಿದ್ದೇನೆ. ಒಟ್ಟಾರೆ ಈ ದೇವಸ್ಥಾನಕ್ಕೆ ಬರುವ ಭಕ್ತರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗಬಾರದೆನ್ನುವುದು ನನ್ನ ಉದ್ದೇಶ ಎಂದರು.

ದೊಡ್ಡಹೊಟ್ಟೆ ರಂಗನಾಥಸ್ವಾಮಿ ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷ ಚಂದ್ರಶೇಖರ್, ಗೌರವಾಧ್ಯಕ್ಷ ಟಿ.ತಿಮ್ಮಪ್ಪ, ಗವಿರಂಗಪ್ಪ, ಕುಮಾರಪ್ಪ, ತಿಪ್ಪೇಸ್ವಾಮಿ, ಉಮೇಶ್, ರಂಗಸ್ವಾಮಿ, ತಿಮ್ಮೇಶ್, ಕೃಷ್ಣಮೂರ್ತಿ, ಗಿರೀಶ್, ತ್ಯಾಗರಾಜ, ದೇವಸ್ಥಾನ ಕಮಿಟಿಯ ಸದಸ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಈ ಸಂದರ್ಭದಲ್ಲಿ ಹಾಜರಿದ್ದರು.

# ಆಶ್ರಯ ಬಡಾವಣೆಯಲ್ಲಿ ಬೀದಿನಾಟಕ ಪ್ರದರ್ಶನ

## ಕುಡಿಯುವ ನೀರು, ಸ್ವಚ್ಛತೆ, ಪರಿಸರ ನೈರ್ಮಲ್ಯ ಕುರಿತು ಜನಜಾಗೃತಿ

» **ಚಿತ್ರದುರ್ಗ**

ಚಿತ್ರದುರ್ಗ ನಗರ ಸಮೀಪದ ಆಶ್ರಯ ಬಡಾವಣೆಯಲ್ಲಿ ಶನಿವಾರ ಕುಡಿಯುವ ನೀರು, ವೈಯಕ್ತಿಕ ಸ್ವಚ್ಛತೆ ಹಾಗೂ ಪರಿಸರ ನೈರ್ಮಲ್ಯ ಪಾಲನೆ ಕುರಿತು ಬೀದಿ ನಾಟಕ ಪ್ರದರ್ಶನದ ಮೂಲಕ ಜನಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಯಿತು.

ನಗರದ ಆಶ್ರಯ ಬಡಾವಣೆಯಲ್ಲಿ ಆರೋಗ್ಯ ಇಲಾಖೆ ವತಿಯಿಂದ ಶುದ್ಧ ಕುಡಿಯುವ ನೀರು, ವೈಯಕ್ತಿಕ ಸ್ವಚ್ಛತೆ, ಪರಿಸರ ನೈರ್ಮಲ್ಯ ಪಾಲನೆ ಕುರಿತು ಹಮ್ಮಿಕೊಂಡಿದ್ದ ಜನಜಾಗೃತಿ ಸಪ್ತಾಹ ಕಾರ್ಯಕ್ರಮಕ್ಕೆ ಭದ್ರಾ ಮೇಲ್ದಂಡೆ ಯೋಜನೆ ಭೂಸ್ವಾಧೀನಾಧಿಕಾರಿ ವಿವೇಕ್ ಹಾಗೂ ಪ್ರೋಬೇಷನರಿ ತಹಶೀಲ್ದಾರ್ ಪ್ರತಿಭಾ ಅವರು ತಮಟೆ ಬಾರಿಸುವ ಮೂಲಕ ಚಾಲನೆ ನೀಡಿದರು.

ಆಟೋ ಪ್ರಚಾರದ ಮೂಲಕ ಕೈತೊಳೆಯುವ ಕುರಿತು, ಶುದ್ಧ ಕುಡಿಯುವ ನೀರು, ಶೌಚಾಲಯ ಬಳಕೆ, ಘನತ್ಯಾಜ್ಯ ವಸ್ತುಗಳ ಬಳಕೆ ವಿಲೇವಾರಿ ಹಾಗೂ ಬಿಸಿಯಾದ, ಮೆದು ಆಹಾರ ಸೇವನೆ ಮಾಡುವಂತೆ ಜಾಗೃತಿ ಮೂಡಿಸಲಾಯಿತು.

ಶಾಲಾ ಮತ್ತು ಅಂಗನವಾಡಿ ಶಿಕ್ಷಕರಿಗೆ ಹಾಗೂ ಮಕ್ಕಳಿಗೆ ಕೈತೊಳೆಯುವ ವಿಧಾನ, ಪ್ರಾತ್ಯಕ್ಷಿಕೆ ನೀಡಿ, ಪ್ರತಿದಿನ ಮಕ್ಕಳು ಪ್ರಾರ್ಥನಾ ಸಮಯದಲ್ಲಿ ಪುನರ್ ಮನನ ಮಾಡಿಕೊಳ್ಳಲು ಶಿಕ್ಷಕರಿಗೆ ತಿಳಿಸಲಾಯಿತು. ಅಲ್ಲದೆ ಎಲ್ಲರೂ ಕಾಯಿಸಿ, ಆರಿಸಿದ ನೀರನ್ನೇ ಕುಡಿಯುವಂತೆ ಮನವಿ ಮಾಡಿದರು.



ಆಶಾ ಕಾರ್ಯಕರ್ತರು ಆಶ್ರಯ ಬಡಾವಣೆಯ ಮನೆ ಮನೆಗೆ ಭೇಟಿ ನೀಡಿ, ಕುಟುಂಬದವರೊಂದಿಗೆ ಮಾತುಕತೆ ನಡೆಸಿ, ಆರೋಗ್ಯ ಶಿಕ್ಷಣದ ಕುರಿತು ಮಾಹಿತಿ ಇರುವ ಕರಪತ್ರಗಳನ್ನು ನೀಡಲಾಯಿತು. ವಾಂತಿ–ಭೇದಿ ಪ್ರಕರಣ ಕಂಡುಬಂದ ಸುತ್ತಮುತ್ತಲಿನ ಮನೆಗಳಿಗೆ ಭೇಟಿ ನೀಡಿ, ಗುಂಪು ಸಭೆ, ಅಂತರ್ ವೈಯಕ್ತಿಕ ಸಮಾಲೋಚನಾ ಮೂಲಕ ಭರವಸೆ ಹಾಗೂ ಧೈರ್ಯ ನೀಡಲಾಯಿತು. ವಾಂತಿ–ಭೇದಿ ಪ್ರಕರಣಗಳನ್ನು ತಾತ್ಕಾಲಿಕವಾಗಿ ಚಿಕಿತ್ಸಾ ಘಟಕಕ್ಕೆ ಕಳುಹಿಸಲು ಸೂಚಿಸಲಾಯಿತು. ಒಆರ್‌ಎಸ್ ಪಾಕೆಟ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕಾಶಿ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಗಿರೀಶ್, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ರೋಗ ಶಾಸ್ತ್ರಜ್ಞ ಡಾ.ರುದ್ರೇಶ್ ಸೇರಿದಂತೆ ಆರೋಗ್ಯ ಇಲಾಖೆ ಹಾಗೂ ನಗರಸಭೆ ಸಿಬ್ಬಂದಿ ಇದ್ದರು.

## ಆಶ್ರಯ ಬಡಾವಣೆ ಒಂದನೆ ಹಂತದಲ್ಲಿ ಗ್ಯಾಂಗ್ ವರ್ಕ್‌ನಿಂದ ಸ್ವಚ್ಚತೆ



» **ಚಿತ್ರದುರ್ಗ**

ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಆರು ಮಂದಿ ಮೃತಪಟ್ಟು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಆಶ್ರಯ ಬಡಾವಣೆ ಒಂದನೆ ಹಂತದಲ್ಲಿ ನಗರಸಭೆ ಭಾನುವಾರ ಗ್ಯಾಂಗ್ ವರ್ಕ್ ನಡೆಸಿ ಸ್ವಚ್ಛತೆ ಕೈಗೊಳ್ಳುವ ಮೂಲಕ ಸುತ್ತಮುತ್ತಲಿನ ಪರಿಸರವನ್ನು ಶುದ್ದವಾಗಿಟ್ಟುಕೊಳ್ಳುವಂತೆ ಅಲ್ಲಿನ ನಿವಾಸಿಗಳಲ್ಲಿ ಜಾಗೃತಿ ಮೂಡಿಸಿತು. ಹೂಳಿನಿಂದ ಮುಚ್ಚಿ ಹೋಗಿದ್ದ ಚರಂಡಿಗಳಿಂದ ರಾಶಿ ರಾಶಿ ಮಣ್ಣನ್ನು ತೆಗೆದು ಚರಂಡಿಯನ್ನು ಸ್ವಚ್ಛಗೊಳಿಸಿ ಮಳೆ ನೀರು ಸರಾಗವಾಗಿ ಹರಿಯುವಂತೆ ನಗರಸಭೆ ಸಿಬ್ಬಂದಿಯವರು ದಾರಿ ಮಾಡಿಕೊಟ್ಟರು. ಮನೆ ಮುಂದೆ ತಾತ್ಕಾಲಿಕವಾಗಿ ಕಟ್ಟಿಕೊಂಡಿದ್ದ ತಡಿಕೆಗಳನ್ನು ಜೆಸಿಬಿ. ಮೂಲಕ ತೆರವುಗೊಳಿಸಿ ಮನೆಯ ಮುಂಭಾಗ ನೀರು ನಿಂತು ಸೊಳ್ಳೆಗಳ ತಾಣವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಆಶ್ರಯ ಬಡಾವಣೆ ನಿವಾಸಿಗಳಿಗೆ ಸೂಚಿಸಲಾಯಿತು. ನಗರಸಭೆ ಪೌರಾಯುಕ್ತರಾದ ಶ್ರೀನಿವಾಸ್, ಪರಿಸರ ಇಂಜಿನಿಯರ್ ಜಾಫರ್, ಹೆಲ್ತ್ ಇನ್ಸ್‌ಪೆಕ್ಟರ್‌ಗಳಾದ ಸರಳ, ಭಾರತಿ, ನಾಗರಾಜ್ ಇವರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

# ಹೊಲಿಗೆ ತರಬೇತಿಯಿಂದ ಸ್ವಾವಲಂಭಿ ಬದುಕು ಕಟ್ಟಿಕೊಳ್ಳಬಹುದು

» **ಚಿತ್ರದುರ್ಗ**

ಹೊಲಿಗೆ ತರಬೇತಿಯಿಂದ ಸ್ವಾವಲಂಭಿ ಬದುಕು ಕಟ್ಟಿಕೊಳ್ಳಬಹುದು. ಮುಂದಿನ ದಿನಗಳಲ್ಲಿ ಮಹಿಳೆಯರಿಗೆ ಕಂಪ್ಯೂಟರ್ ತರಬೇತಿಯನ್ನು ನೀಡುವ ಚಿಂತನೆಯಿದೆ ಎಂದು ಕೆಂಚಾಂಬ ಮಹಿಳಾ ವಿವಿದೊದ್ದೇಶ ಸಹಕಾರ ಸಂಘದ ಉಪಾಧ್ಯಕ್ಷೆ ರತ್ನನಾಯಕಿ ಹೇಳಿದರು.

ಚಳ್ಳಕೆರೆ ತಾಲ್ಲೂಕಿನ ಕಾಪರಹಳ್ಳಿಯಲ್ಲಿ ಕೆಂಚಾಂಬ ಮಹಿಳಾ ವಿವಿದೋದ್ದೇಶ ಸಹಕಾರ ಸಂಘದ 24 ನೇ ವಾರ್ಷಿಕೋತ್ಸವವನ್ನು ಶನಿವಾರ ಉದ್ಘಾಟಿಸಿ ಮಾತನಾಡಿದರು.

ಕಳೆದ 24 ವರ್ಷಗಳಿಂದಲೂ ಮಹಿಳೆಯರಿಗೆ ಹೊಲಿಗೆ ತರಬೇತಿ ನೀಡುತ್ತಿದ್ದು, ಇದರಿಂದ ಸಾವಿರಾರು ಮಹಿಳೆಯರು ಪ್ರಯೋಜನ ಪಡೆದಿದ್ದಾರೆ.




ಮುಂದೆ ಕಂಪ್ಯುಟರ್ ತರಬೇತಿ ನೀಡಲಾಗುವುದು. ಅದಕ್ಕಾಗಿ ನಿವೇಶನ ಖರೀಧಿಸಿದ್ದು, ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡುವಂತೆ ಚಳ್ಳಕೆರೆ ಶಾಸಕರಲ್ಲಿ ಮನವಿ ಮಾಡಿದ ರತ್ನನಾಯಕಿ ವೃದ್ದಾಶ್ರಮ ತೆರೆಯಲು ಸರ್ಕಾರದಿಂದ ಅನುಮತಿ ಕೊಡಿಸುವಂತೆ ವಿನಂತಿಸಿದರು.

## ಯುವ ಪೀಳಿಗೆಗೆ ಭಕ್ತಿಯ ಅರಿವನ್ನು ಮೂಡಿಸಿ: ಯೋಜನಾಧಿಕಾರಿ

» **ಹೊಸದುರ್ಗ**

ಯುವ ಪೀಳಿಗೆಗೆ ಭಕ್ತಿಯ ಅರಿವನ್ನು ಮೂಡಿಸುವುದು ದೇವಸ್ಥಾನ ಅಭಿವೃದ್ಧಿ ಸಮಿತಿಯವರ ಕಾಯಕವಾಗಲಿ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ಎಸ್. ಶಿವಣ್ಣ ಸಲಹೆ ನೀಡಿದರು. ತಾಲ್ಲೂಕಿನ ದ್ಯಾವಜ್ಜನ ಪಾಳ್ಯದ ಶ್ರೀ ಸೇವಲಾಲ್ ದೇವಸ್ಥಾನಕ್ಕೆ 1ಲಕ್ಷ ಡಿಡಿಯನ್ನು ವಿತರಿಸಿ ನಂತರ ಮಾತನಾಡಿದ ಅವರು, ಹಿರಿಯರು ದೇವಸ್ಥಾನಗಳ ಕಟ್ಟುವುದರ ಜೊತೆಗೆ ಭವಿಷ್ಯದ ಯುವ ಪೀಳಿಗೆಗೆ ಅರಿವನ್ನು ಮೂಡಿಸುತ್ತಿದ್ದರು. ಪ್ರಸ್ತುತ ದಿನಗಳಲ್ಲಿ ಅತಿಹೆಚ್ಚು ದೇವಸ್ಥಾನಗಳ ನಿರ್ಮಾಣವಾಗುತ್ತಿದೆ. ಆದರೆ ಇಂದಿನ ಯುವಪೀಳಿಗೆಗೆ ದೇವಸ್ಥಾನಗಳ ಮಹತ್ವ ಮತ್ತು ನಂಬಿಕೆ ಭಕ್ತಿ ಅರಿವು ಕಡಿಮೆ ಆಗುತ್ತಿರುವುದು ವಿಷಾಧನೀಯ ಎಂದು ಬೇಸರಿಸಿದರು.

**ಪ್ರಮುಖ ಸುದ್ದಿ**

# ಕ್ರಾಂತಿಕಾರಿ ಹಾಡುಗಾರ ಗದ್ದರ್‌ಗೆ ನುಡಿಹಾಡು ಕಾರ್ಯಕ್ರಮ

» **ಚಿತ್ರದುರ್ಗ**

ಕ್ರಾಂತಿಕಾರಿ ಹಾಡುಗಾರ, ಗಟ್ಟಿ ಧ್ವನಿಯ ಸರದಾರ ಗದ್ದರ್‌ಗೆ ಕ್ರೀಡಾ ಭವನದಲ್ಲಿ ಶುಕ್ರವಾರ ನುಡಿಹಾಡು ಕಾರ್ಯಕ್ರಮದ ಮೂಲಕ ನಮನ ಸಲ್ಲಿಸಲಾಯಿತು.

ಜಂಬೂ ದ್ವೀಪ ಕರ್ನಾಟಕ, ಮಹಾತ್ಮಪುಲೆ ಅಧ್ಯಯನ ಕೇಂದ್ರ, ಜಿಲ್ಲಾ ದಲಿತ ಸಾಹಿತ್ಯ ಪರಿಷತ್ ಚಿತ್ರದುರ್ಗ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ನುಡಿ ಹಾಡು ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ನಿವೃತ್ತ ಪ್ರಾಚಾರ್ಯರಾದ ಜೆ.ಯಾದವರೆಡ್ಡಿ ಕ್ರಾಂತಿಕಾರಿ ಗದ್ದರ್‌ರವರ ಹೋರಾಟದ ಹಾಡುಗಳನ್ನು ಇಂದಿಗೂ ಯಾರು ಮರೆಯುವಂತಿಲ್ಲ. ಯುವ ಪೀಳಿಗೆ, ವಿದ್ಯಾರ್ಥಿಗಳು, ಗದ್ದರ್‌ರವರ ಹೋರಾಟವನ್ನು ಮುಂದುವರೆಸಿಕೊಂಡು ಹೋಗುವುದೇ ಗದ್ದರ್‌ಗೆ ಸಲ್ಲಿಸುವ ನಿಜವಾದ ಗೌರವ ಎಂದು ಹೇಳಿದರು.

ಶಿವಕುಮಾರ್ ಮಾತನಾಡುತ್ತ ಇಂದಿನ ದಿನಮಾನಗಳಲ್ಲಿ ವಿದ್ಯಾರ್ಥಿಗಳು ಯುವ ಜನಾಂಗದಲ್ಲಿ ಹೋರಾಟದ ಮನಸ್ಸುಗಳೆ ಇಲ್ಲದಂತಾಗಿರುವುದರಿಂದ ರಾಜಕೀಯ ಸೇರಿದಂತೆ ಎಲ್ಲಾ ಕ್ಷೇತ್ರಗಳು ಕಲುಷಿತಗೊಂಡಿವೆ. ಬಡವರ ಪರ ಸರ್ಕಾರ ರಚನೆಯಾಗಬೇಕಾದರೆ ಗದ್ದರ್‌ರವರಂತ ಹೋರಾಟಗಾರರು ಬೇಕು ಎಂದು ಅಭಿಪ್ರಾಯಪಟ್ಟರು.




ನಿವೃತ್ತ ಪ್ರಾಚಾರ್ಯರಾದ ಡಾ.ಅಶೋಕ್‌ಕುಮಾರ್ ಸಂಗೇನಹಳ್ಳಿ ಮಾತನಾಡಿ ಕೆಚ್ಚೆದೆಯ ಹಾಡುಗಾರ, ಕ್ರಾಂತಿಕಾರಿ ಹಾಡುಗಳ ಮೂಲಕವೇ ಲಕ್ಷಾಂತರ ಜನರ ಮನಸ್ಸಿನಲ್ಲಿ ಉಳಿದಿರುವ ಗದ್ದರ್‌ರವರ ಹಾಡುಗಳನ್ನು ಯಾರು ಮರೆಯುವಂತಿಲ್ಲ ಎಂದು ಸ್ಮರಿಸಿದರು.

ದಲಿತ ಮುಖಂಡ ಕುಂಚಿಗನಹಾಳ್ ಮಹಲಿಂಗಪ್ಪ ಮಾತನಾಡುತ್ತ ಕ್ರಾಂತಿ ಗೀತೆಗಳ ಮೂಲಕವೇ ದಲಿತರ ಮನಸ್ಸು ಗೆದ್ದಿದ್ದ ಹೋರಾಟಗಾರ ಗದ್ದರ್‌ರವರು ಚಿತ್ರದುರ್ಗದ ಮುರುಘಾಮಠಕ್ಕೆ ಆಗಮಿಸಿ ಬಸವಶ್ರೀ ಪ್ರಶಸ್ತಿ ಸ್ವೀಕರಿಸಿದ ಸಂದರ್ಭದಲ್ಲಿ ಅವರನ್ನು ಹತ್ತಿರದಿಂದ ನೋಡಿ ಮಾತನಾಡಿಸುವ ಅವಕಾಶ ಸಿಕ್ಕಿತ್ತು ಎನ್ನುವುದನ್ನು ನೆನಪಿಸಿಕೊಂಡರು.

ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಚಾರ್ಯರಾದ ಬಿ.ಕೃಷ್ಣಪ್ಪ ಮಾತನಾಡಿ ಗದ್ದರ್ ಕ್ರಾಂತಿಗೀತೆಗಳ ಮೂಲಕ ದಮನಿತರ ಧ್ವನಿಯಾಗಿದ್ದರು ಎಂದರು.

ಕಾರ್ಯಕ್ರಮದ ಸಂಘಟಕ ಪ್ರಾಧ್ಯಾಪಕ ಬಿ.ಎಂ.ಗುರುನಾಥ್ ಮಾತನಾಡಿ ಗಟ್ಟಿ ಧ್ವನಿಯ ಗದ್ದರ್, ಕ್ರಾಂತಿಕಾರಿ ಹಾಡುಗಳ ಸರದಾರ ಕೇಂದ್ರ ಸರ್ಕಾರದ ಹುದ್ದೆ ತ್ಯಜಿಸಿ ಬಡವರಿಗಾಗಿ ಬರಿ ಹೊಟ್ಟೆಯಲ್ಲಿ ನಡೆದಾಡಿದರು. ನಿಂತಲ್ಲೆ ಗೆಜ್ಜೆಕಟ್ಟಿ ಕುಣಿದು ಹಾಡುತ್ತಿದ್ದ ಗದ್ದರ್ ಹಾಡಿನ ಮೂಲಕ ದೇಶದ ಅಸಮಾನತೆ ವಾಸ್ತವತೆಯನ್ನು ತೆರೆದಿಟ್ಟರು. ತಳಸಮುದಾಯದ ಏಳಿಗೆಗಾಗಿ ಹೋರಾಡಿದ ಗದ್ದರ್‌ರವರ ಚಿಂತನೆ ಹಸಿದವರ, ಧಮನಿತರ ಪರವಾಗಿತ್ತು. ಜಾತಿವಾದಿ ಭೂ ಮಾಲೀಕರ ಹಿಕ್ಮತ್‌ಗಳ ವಿರುದ್ದ ಹೋರಾಡಿದ ಗದ್ದರ್ ಕೇವಲ ಆಂಧ್ರ, ಕರ್ನಾಟಕವಲ್ಲ. ಇಡೀ ದೇಶದಲ್ಲಿಯೇ ಕ್ರಾಂತಿ ಹಾಡುಗಳ ಮೂಲಕ ಹೆಸರಾದವರು ಎಂದರು.

ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆ ಸಿಂಧನೂರು ಪ್ರಧಾನ ಗಾಯಕ ಡಾ.ಬಿ.ಎಂ.ಪುಟ್ಟಣ್ಣಯ್ಯ ಕವಿ ಗದ್ದರ್‌ರವರನ್ನು ಪ್ರಜಾಪ್ರಭುತ್ವದ ಚೌಕಟ್ಟಿನ ಒಳಗೆ ವಿಶ್ಲೇಷಣೆ ಮಾಡುವ ಅಗತ್ಯವಿದೆ. ಪ್ರಜಾಪ್ರಭುತ್ವದ ಆಶಯ ಮೌಲ್ಯಗಳು ಈಡೇರದಿದ್ದಾಗ ಹೋರಾಟ, ಚಳುವಳಿಗಳು ಹುಟ್ಟಿಕೊಂಡವು. ಪ್ರಗತಿಪರ ಸಾಹಿತ್ಯ, ಚಳುವಳಿ, ಹಾಡುಗಾರರ ಮೇಲೆ ಗದ್ದರ್ ಪ್ರಭಾವ ಬೀರಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T